ಸಂಪುಟ : 9 ಸಂಚಿಕೆ 198 ಪುಟ : 4 ಬೆಲೆ: 3.00 ಶನಿವಾರ ಸೆಪ್ಟೆಂಬರ್ 14 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 198 Pages : 4 Price : 3.00 Saturday september 14 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

# ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ಹಮ್ಮಿಕೊಳ್ಳುವ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ, ಸುವ್ಯವಸ್ಥಿತವಾಗಿ ಹಮ್ಮಿಕೊಂಡು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ವಿಡಿಯೋ ಕಾನ್ಫರನ್ಸ್ ಹಾಲ್‌ನಲ್ಲಿ ಶುಕ್ರವಾರ ಜರುಗಿದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಈ ನಿಟ್ಟಿನಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮಾನವ ಸರಪಳಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಸೆಪ್ಟೆಂಬರ್ 15ರಂದು ಮಾನವ ಸರಪಳಿ ಕಾರ್ಯಕ್ರಮ ಜರುಗುತ್ತಿದ್ದು,ಗದಗ ಜಿಲ್ಲೆಯ ಶಿರಹಟ್ಟಿ, ಲಕ್ಷ್ಮೇಶ್ವರ, ಮುಂಡರಗಿ ತಾಲೂಕಿನಲ್ಲಿ ಮಾನವ ಸರಪಳಿ ಹಾದು ಹೋಗಲಿದೆ. ಪ್ರತಿ ಕಿಲೋಮೀಟರ್‌ಗೆ ಒಬ್ಬರು ನೋಡಲ್ ಅಧಿಕಾರಿಯನ್ನು ನೇಮಿಸಬೇಕು. ಅಂದು ಬೆಳಿಗ್ಗೆ 9.30ಕ್ಕೆ ಎಲ್ಲರೂ ಸರದಿ ಸಾಲಿನಲ್ಲಿ ನಿಂತ ನಂತರ ನಾಡಗೀತೆ ಹಾಡುವುದು, ಸಂವಿಧಾನ ಪೀಠಿಕೆ ಓದುವುದು, ನಂತರ ಮಾನವ ಸರಪಳಿ ಕಾರ್ಯಕ್ರಮ ಜರುಗಲಿದೆ ಎಂದರು.

ಆಯಾ ತಾಲೂಕಿನ ತಹಸೀಲ್ದಾರರು ಮತ್ತು ತಾ.ಪಂ ಕಾರ್ಯನಿರ್ವಾಹಕರು ಒಳಗೊಂಡು ಸೂಕ್ಷ್ಮ ಯೋಜನೆ ತಯಾರಿಸಿ ಮಾನವ ಸರಪಳಿ ಹಾದುಹೋಗುವ ಗ್ರಾಮ ಸ್ಥೆರಿದಂತೆ 10 ಕಿಮೀ ವ್ಯಾಪ್ತಿಯಲ್ಲಿರುವ ಗ್ರಾಮಗಳಲ್ಲಿ ಗ್ರಾಮಸಭೆಯನ್ನು ನಡೆಸಬೇಕು. ಸದರಿ ಕಾರ್ಯಕ್ರಮದ ಕುರಿತು ಡಂಗುರ ಸಾರಬೇಕು ಹಾಗೂ ಕಾರ್ಯಕ್ರಮದ ದಿನದಂದು ಮಾನವ ಸರಪಳಿ ಹಾದುಹೋಗುವ 10 ಕಿ.ಮೀ ವ್ಯಾಪ್ತಿಯಲ್ಲಿ ಬರುವ ಎಲ್ಲ ಸರಕಾರಿ ಶಾಲೆಗಳಲ್ಲಿ ಬಿಸಿ ಊಟದ ವ್ಯವಸ್ಥೆ ಮಾಡಿಸಬೇಕು. ಆಯಾ ಗ್ರಾಮಗಳ ವ್ಯಾಪ್ತಿಯಲ್ಲಿ ಬರುವ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಸೀಲ್ದಾರರು, ಪಿಡಿಓ, ನರೇಗಾ, ಗ್ರಾಮ ಪಂಚಾಯತ್ ಅಧಿಕಾರಿ ಸಿಬ್ಬಂದಿಗಳು ಅವಶ್ಯಕ ಪೂರ್ವಸಿದ್ದತಾ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.



> ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, ಮಾನವ ಸರಪಳಿಯ ಕಾರ್ಯಕ್ರಮದ ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಲ್ಲಾ ಅಧಿಕಾರಿಗಳು, ಸಿಬ್ಬಂದಿ, ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಡಿಕೊಳ್ಳಬೇಕು. ಮಾನವ ಸರಪಳಿಯ ನೋಂದಣಿಗೆ ತಮ್ಮ ಕುಟುಂಬದ ಸದಸ್ಯರು, ನೆರೆಹೊರೆಯವರೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ https://www.democracydaykarnataka.in/registrationನಲ್ಲಿ ಆನ್‌ಲೈನ್ ರೆಜಿಸ್ಟ್ರೇಶನ್ ಮಾಡಿಸಿ ಜಿಲ್ಲೆಗೆ ಉತ್ತಮ ಸ್ಥಾನ ತರಬೇಕು ಎಂದು ತಿಳಿಸಿದರು.

> ತಾಲೂಕಿನ ಮುಖ್ಯ ರಸ್ತೆಯಲ್ಲಿ ಮಾನವ ಸರಪಳಿ ಹಾದು ಹೋಗುವಾಗ ವಾಹನ ದಟ್ಟಣೆ ಬಗ್ಗೆ ಗಮನಹರಿಸಿ ವಿದ್ಯಾರ್ಥಿಗಳ ಸುರಕ್ಷತೆ ಕಡೆ ಗಮನವಹಿಸಿ ವಾಹನ ಸವಾರರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿರ್ವಹಿಸಬೇಕು. ಸಮಾಜ ಕಲ್ಯಾಣ ಇಲಾಖೆ, ಪೊಲೀಸ್ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಯಾವುದೇ ಲೋಪವಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಮಾನವ ಸರಪಳಿ ಕಾರ್ಯಕ್ರಮದಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಂಡು ಮಾನವ ಸರಪಳಿಯ ಪ್ರಾರಂಭ ಮತ್ತು ಅಂತ್ಯ ಸ್ಥಳವನ್ನು ಗುರುತಿಸಬೇಕು ಎಂದು ಡಿಸಿ ಗೋವಿಂದರೆಡ್ಡಿ ಸೂಚಿಸಿದರು.

ಮುಂಡರಗಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಮಾನವ ಸರಪಳಿ ಕಾರ್ಯಕ್ರಮಕ್ಕೆ ಆಗಮಿಸಲಿದ್ದು, ಕಾರ್ಯಕ್ರಮ ಸ್ಥಳದಲ್ಲಿ ಸ್ವಚ್ಛತೆ ಹಾಗೂ ಶಾಂತಿ-ಸುವ್ಯವಸ್ಥೆ ಕಾಪಾಡುವತ್ತ ಗಮನ ಹರಿಸಬೇಕೆಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಮಾತನಾಡಿ, ಪೊಲೀಸ್ ಇಲಾಖೆಯ ಪಿಎಸ್‌ಐ, ಡಿವಾಯ್‌ಎಸ್‌ಪಿ ಮತ್ತು ಸಂಚಾರಿ ಪೊಲೀಸ್ ಸಿಬ್ಬಂದಿಗಳು ಕಾರ್ಯನಿವಹಿಸಿ ಮಾನವ ಸರಪಳಿಗೆ ಸಂಪೂರ್ಣ ಬಂದೋಬಸ್ತ ಒದಗಿಸಲಾಗುವುದು ಎಂದು ಹೇಳಿದರು.

ಸ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ.ಎಲ್. ಬಾರಟಕ್ಕಿ, ವಿವಿಧ ತಾಲೂಕಿನ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಅಂತಾರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ: ಕಾರ್ಯಕ್ರಮದ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಾಭಿವೃದ್ಧಿ ಇಲಾಖೆ ಇವರ ಸಹಭಾಗಿತ್ವದಲ್ಲಿ ಸೆಪ್ಟೆಂಬರ್ 15ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ರಚನೆ ಮತ್ತು ಕಾರ್ಯಕ್ರಮವನ್ನು ಈ ಕೆಳಗಿನಂತೆ ಹಮ್ಮಿಕೊಳ್ಳಲಾಗಿದೆ.

ಮುಂಜಾನೆ 9.30 ರಿಂದ 9:37 ರ ವರೆಗೆ ಗದಗ ಜಿಲ್ಲೆ ಬಾಲೆಹೊಸೂರು ಗ್ರಾಮದಿಂದ ಪ್ರಾರಂಭವಾಗಿ ಸೂರಣಗಿ, ನಿಲೋಗಲ್, ಬೆಳ್ಳಟ್ಟಿ, ಸುಗ್ನಳ್ಳಿ ಬನ್ನಿಕೊಪ್ಪ, ಬಾಗೇವಾಡಿ, ಕಲಕೇರಿ, ಮುಂಡರಗಿ ಮಾರ್ಗವಾಗಿ ಕೊಪ್ಪಳ ಜಿಲ್ಲೆ ಅಳವಂಡಿವರೆಗೆ ಒಟ್ಟು 61 ಕಿ.ಮೀ ಮಾನವ ಸರಪಳಿಯನ್ನು ರಚಿಸಲಾಗಿದ್ದು, ಈ ಮಾನವ ಸರಪಳಿಯಲ್ಲಿ ಭಾಗವಹಿಸುವವರು ಸರದಿ ಸಾಲಿನಲ್ಲಿ ನಿಲ್ಲುವುದು.

ಮುಂಡರಗಿ ಪಟ್ಟಣದಲ್ಲಿ ಸಮಾರಂಭ ಹಮ್ಮಿಕೊಳ್ಳಲಾಗಿದ್ದು, ಮುಂಜಾನೆ 9:37 ರಿಂದ 9:40 ರ ವರೆಗೆ ನಾಡಗೀತೆ, 9:40 ರಿಂದ 9.55 ರ ವರೆಗೆ ಮುಖ್ಯ ಅತಿಥಿಗಳಿಂದ ಭಾಷಣ, 9:55 ರಿಂದ 9:57 ರ ವರೆಗೆ ಸಂವಿಧಾನ ಪ್ರಸ್ತಾವನೆ ಓದುವುದು. 9:57 ರಿಂದ 9:59 ರ ವರೆಗೆ ಮಾನವ ಸರಪಳಿಯಲ್ಲಿ ಕೈ ಕೈ ಹಿಡಿದು ನಿಲ್ಲುವುದು. (ದ್ರೋಣ ಶೂಟ್, ವಿಡಿಯೋ ಚಿತ್ರೀಕರಣ ಚಿತ್ರಿಕರಿಸುವುದು). 10:00 ಗಂಟೆಗೆ ಮಾನವ ಸರಪಳಿಯಲ್ಲಿಯೇ ತಮ್ಮ ಎರಡು ಕೈಗೊಳ್ಳನ್ನು ಮೇಲೆತ್ತಿ "ಜೈ ಹಿಂದ್, ಜೈ ಕರ್ನಾಟಕ" ಘೋಷಣೆ ಕೂಗಿ ಸರಪಳಿಯನ್ನು ಕಳಚುವದು. ಕಾರ್ಯಕ್ರಮ ಮುಕ್ತಾಯ. ಮೇಲಿನ ಕಾರ್ಯಕ್ರಮಕ್ಕೆ ತಾವುಗಳು ಭಾಗಿಯಾಗಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಹುಲ್ ಗಾಂಧಿಯವರಿಂದ ದಲಿತ ವಿರೋಧಿ ಹೇಳಿಕೆ । ಬಿಜೆಪಿ ಖಂಡನೆ

# ರಾಹುಲ್ ಗಾಂಧಿ ಪ್ರತಿಕೃತಿ ದಹನ

■ವಿಜಯಸಾಕ್ಷಿ ಸುದ್ದಿ, ಗದಗ

ಎಐಸಿಸಿ ನಾಯಕ ಹಾಗೂ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಇತ್ತೀಚೆಗೆ ಅಮೇರಿಕಾದಲ್ಲಿ ನೀಡಿರುವ ದಲಿತ ವಿರೋಧಿ ಹೇಳಿಕೆಯನ್ನು ಖಂಡಿಸಿ ಗದಗ ಜಿಲ್ಲಾ ಬಿಜೆಪಿ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಶಿವಪ್ಪ ಮುಳಗುಂದ ನೇತೃತ್ವದಲ್ಲಿ ಬಿಜೆಪಿ ಮುಖಂಡರು ಗದಗ ಜಿಲ್ಲಾಡಳಿತ ಮುಂಭಾಗದಲ್ಲಿ ರಾಹುಲ್ ಗಾಂಧಿ ವಿರುದ್ಧ ಘೋಷಣೆಗಳನ್ನು ಕೂಗಿ ಅವರ ಪ್ರತಿಕೃತಿ ದಹಿಸುವ ಮೂಲಕ ತಮ್ಮ ಆಕ್ರೋಶವನ್ನು ಹೊರಹಾಕಿದರು.



ಬಿಜೆಪಿ ಯುವಮುಖಂಡ ಉಮೇಶಗೌಡ ಪಾಟೀಲ್ ಮಾತನಾಡಿ, ರಾಹುಲ್ ಗಾಂಧಿಯವರು ಅಮೇರಿಕಾದಲ್ಲಿ ದಲಿತ ವಿರೋಧಿ ಹೇಳಿಕೆ ನೀಡುವ ಮೂಲಕ ತಮ್ಮ ತಾಯ್ನೆಲವನ್ನು ಅವಮಾನಿಸಿದ್ದು ಖಂಡನೀಯ ಎಂದರು. ಗದಗ ಜಿಲ್ಲಾ ಬಿಜೆಪಿ ಎಸ್.ಸಿ ಮೋರ್ಚಾ ಅಧ್ಯಕ್ಷ ಮಂಜುನಾಥ ಶಿವಪ್ಪ ಮುಳಗುಂದ ಮಾತನಾಡಿ, ಚುನಾವಣಾ ಪ್ರಚಾರದಲ್ಲಿ ಸಾಮಾಜಿಕ ನ್ಯಾಯದ ಬಗ್ಗೆ ಮಾತುನಾಡುತ್ತಿರುವ ತಾವು ಸಂವಿಧಾನ ಶಿಲ್ಪಿ ಡಾ.ಅಂಬೇಡ್ಕರ್ ಅವರನ್ನು ಸ್ಮರಿಸಿಯೇ ಮುಂದೆ ಸಾಗಬೇಕು. ಅವರು ರಚಿಸಿರುವ ಸಂವಿಧಾನದ ಅಧಾರದ ಮೇಲೆಯೇ ದೇಶದ ಆಡಳಿತ ನಡೆಯುತ್ತಿರುವುದು ದಲಿತ ಸಮುದಾಯಕ್ಕೆ ಹೆಮ್ಮೆ ಮತ್ತು ಅಭಿಮಾನದ ಸಂಗತಿಯಾಗಿದೆ. ದಲಿತರನ್ನು ಗೌರವಿಸದ ಕಾಂಗ್ರೆಸ್ ನಾಯಕ ಮತ್ತು ಕಾಂಗ್ರೆಸ್ ಪಕ್ಷಕ್ಕೆ ಪಾಠ ಕಲಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಎಂ.ಎಸ್. ಕರಿಗೌಡ್ರ, ಶ್ರೀಕಾಂತ ಖಟವಟೆ, ಭೀಮಸಿಂಗ್ ರಾಠೋಡ, ಅಶೋಕ ಕುಡತಿನ್ನಿ, ಉಡಚಪ್ಪ ಹಳ್ಳಕೇರಿ, ಅನಿಲ ಅಬ್ಬಿಗೇರಿ, ಅಶೋಕ ಮುಳಗುಂದ, ಬೂದಪ್ಪ ಹಣಶೀಮರದ, ನಿರ್ಮಲಾ ಕೊಳ್ಳಿ, ಮಲ್ಲು ಮಾದರ, ಸುರೇಶ ಚಲವಾದಿ ಸೇರಿದಂತೆ ವಿವಿಧ ಮೋರ್ಚಾ, ಮಂಡಲ ಪದಾಧಿಕಾರಿಗಳು ಹಾಗೂ ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡಿದ್ದರು.

> ರಾಜ್ಯಸಭಾ ಸದಸ್ಯ ನಾರಾಯಣಸಾ ಬಾಂಡಗೆ ಮಾತನಾಡಿ, ದಲಿತ ವಿರೋಧಿ ಹೇಳಿಕೆ ನೀಡಿರುವ ರಾಹುಲ್ ಗಾಂಧಿಯವರನ್ನು ಸಂಸದ ಸ್ಥಾನದಿಂದ ವಜಾ ಮಾಡಬೇಕು ಎಂದು ಆಗ್ರಹಿಸಿದರು.
>
> ವಿ.ಪ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜಣ್ಣ ಕುರಡಗಿ, ದಲಿತ ವಿರೋಧಿಯಾಗಿರುವ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಂಸದರಾಗಿ ಮುಂದುವರೆಯುವ ಅರ್ಹತೆ ಕಳೆದುಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಗಣಿತ ಕಲಿಕಾ ಆಂದೋಲನದ ಕಾರ್ಯಕ್ರಮದಲ್ಲಿ ಎಚ್.ಎನ್. ನಾಯ್ಕ್ ಅಭಿಮತ

# ಗಣಿತ ವಿಷಯ ಕಬ್ಬಿಣದ ಕಡಲೆಯಲ್ಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಕ್ಷೇತ್ರ ಸಂಪನ್ಮೂಲ ಕೇಂದ್ರ ಶಿರಹಟ್ಟಿ ಹಾಗೂ ಗ್ರಾಮ ಪಂಚಾಯಿತಿ ಹುಲ್ಲೂರು ಸಹಯೋಗದಲ್ಲಿ ಹುಲ್ಲೂರು ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಜರುಗಿದ ಗಣಿತ ಕಲಿಕಾ ಆಂದೋಲನದ ಶಾಲಾ ಮಕ್ಕಳ ಗಣಿತ ಸ್ಪರ್ಧೆಯ ತಾಲೂಕಾ ಮಟ್ಟದ ಕಾರ್ಯಕ್ರಮವನ್ನು ಶುಕ್ರವಾರ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗಣಿತ ಕಬ್ಬಿಣದ ಕಡಲೆ ಎನ್ನುವ ಭಾವನೆ ಎಲ್ಲರಲ್ಲಿ ಮನೆ ಮಾಡಿದೆ. ಆದರೆ ಗಣಿತ ಅತ್ಯಂತ ಸರಳ ವಿಷಯವಾಗಿದ್ದು, ಆಸಕ್ತಿಯಿಂದ ಕಲಿತರೆ ಅದರ ಮೇಲೆ ಹಿಡಿತ ಸಾಧಿಸಬಹುದು. ಮಕ್ಕಳಲ್ಲಿ ಗಣಿತ ಕಲಿಕೆ ದೃಢಗೊಂಡರೆ ಅದರ ಧನಾತ್ಮಕ ಪರಿಣಾಮ ಅವರ ವ್ಯಕ್ತಿತ್ವದ ಮೇಲೆ ಉಂಟಾಗುತ್ತದೆ. ಗಣಿತದ ಮೂಲಕ ನಾವು ನಮ್ಮ ವ್ಯಕ್ತಿತ್ವವನ್ನು ಬೆಳೆಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.



ಎಸ್‌ಡಿಎಂಸಿ ಅಧ್ಯಕ್ಷ ಬರಮಪ್ಪ ಹಳ್ಳಿಗೊರವರ ಅಧ್ಯಕ್ಷತೆ ವಹಿಸಿದ್ದರು. ಪ್ರೌಢಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಸುರೇಶ ಸಾಸಲವಾಡ, ಗ್ರಾ.ಪಂ ಸದಸ್ಯರಾದ ಪಿ.ಪಿ. ಪಾಟೀಲ, ಯಲ್ಲಪ್ಪ ನರಸೋಜಿ, ಮಾಬೂಲಿ ಗಾಡಗೋಳಿ, ಶಂಕ್ರಪ್ಪ ಮಾಗಡಿ ಹಸನಸಾಬ ನದಾಫ, ಬಸವರಾಜ ಮೂಕಿ, ಬಸವರಾಜ ರಗಟಿ, ಫಕೀರೇಶ ರಗಟಿ ಪಾಲ್ಗೊಂಡಿದ್ದರು. ಲಾವಣ್ಯ ಮಾಗಡಿ ಪ್ರಾರ್ಥಿಸಿದಳು. ಸಿಆರ್‌ಪಿ ಗಿರೀಶ ನೇಕಾರ ಸ್ವಾಗತಿಸಿದರು. ಎ.ಎಮ್.ಗುತ್ತಲ ನಿರೂಪಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಎಸ್.ಎಂ. ಲಮಾಣಿ ವಂದಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎಸ್.ಜಿ. ರಾಜೋಳಿ, ಆರ್.ಜಿ. ಈಳಿಗೇರ, ಡಿ.ಎಲ್. ಪಾಟೀಲ, ಎಫ್.ಪಿ. ಡಂಬಳ, ಎಚ್.ಕೆ. ಮಸೂತಿ, ಜಿ.ಎಂ. ತಿರ್ಲಾಪುರ, ಜಿ.ಜಿ. ಸೂರಣಗಿ ಹಾಗೂ ಗ್ರಾಮದ ಶಿಕ್ಷಣ ಪ್ರೇಮಿಗಳು ಉಪಸ್ಥಿತರಿದ್ದರು. ಹುಲ್ಲೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ 4, 5 ಹಾಗೂ 6ನೇ ತರಗತಿಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

> ಪ್ರಾಸ್ತಾವಿಕವಾಗಿ ಮಾತನಾಡಿದ ಗಣಿತ ಕಲಿಕಾ ಆಂದೋಲನದ ತಾಲೂಕಾ ನೋಡಲ್ ಅಧಿಕಾರಿ ಬಿಆರ್‌ಪಿ ಈಶ್ವರ ಮೆಡ್ಲೇರಿ, ಗಣಿತ ಕಲಿಕಾ ಆಂದೋಲನದ ಗಣಿತ ಸ್ಪರ್ಧೆಯು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಮಾತ್ರ ಇದ್ದು, ಇದು ಅವರಲ್ಲಿ ಗಣಿತದ ಕಲಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ಉದ್ದೇಶವನ್ನು ಹೊಂದಿದೆ. ಈ ಪರೀಕ್ಷೆಗಳ ಫಲಿತಾಂಶವನ್ನು ವಿಶ್ಲೇಷಿಸಿ ಗಣಿತದ ಕಲಿಕೆಗೆ ಮತ್ತಷ್ಟು ಪೂರಕ ಯೋಜನೆಯನ್ನು ರೂಪಿಸಲಾಗುತ್ತದೆ ಎಂದರು.

# ಗರ್ಭಿಣಿಯರಲ್ಲಿ ಅಪೌಷ್ಟಿಕತೆ ಹೋಗಲಾಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗರ್ಭಿಣಿಯರಿಗೆ ಸರಿಯಾದ ಆಹಾರ ದೊರೆಯದೆ ಇರುವದರಿಂದ ಅಥವಾ ಪೌಷ್ಟಿಕ ಆಹಾರಗಳ ಕೊರತೆಯಿಂದ ಗರ್ಭಿಣಿ/ತಾಂಯಂದಿರಲ್ಲಿ ರಕ್ತಹೀನತೆ, ಅಪೌಷ್ಟಿಕತೆ ಕಂಡು ಬರುತ್ತದೆ. ಈ ನಿಟ್ಟಿನಲ್ಲಿ ರಾಷ್ಟ್ರೀಯ ಪೋಷಣ ಅಭಿಯಾನದ ಮೂಲಕ ಅಪೌಷ್ಟಿಕತೆಯನ್ನು ತಡೆಯುವ ಉದ್ದೇಶವನ್ನು ಹೊಂದಿದೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಬಾಲೆಹೊಸೂರಿನ ಗ್ರಾಮದ ಅಂಗನವಾಡಿ ಕೇಂದ್ರ 93ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿರಹಟ್ಟಿ ಇವರ ಸಹಯೋಗದಲ್ಲಿ ಪೋಷಣ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ಅರೋಗ್ಯದ ಹಿತದೃಷ್ಟಿಯಿಂದ ಇಂತಹ ಪೋಷಣ ಅಭಿಯಾನ ಕಾರ್ಯಕ್ರಮಗಳನ್ನು ಮಾಡಿ ಗರ್ಭಿಣಿ ಸ್ತ್ರೀಯರಲ್ಲಿ ಯಾವ ಸಮಸ್ಯೆಗಳು ಉಂಟಾಗುತ್ತವೆ, ಗರ್ಭಿಣಿಯರು ಯಾವ ಆಹಾರವನ್ನು ಸೇವಿಸಬೇಕು ಎಂದು ತಿಳಿಸುವ ಕಾರ್ಯಕ್ರಮ ಇದಾಗಿದೆ. ಗರ್ಭಿಣಿಯರು ಹಸಿ ತರಕಾರಿಗಳನ್ನು, ಮೊಳಕೆ ಕಾಳುಗಳನ್ನು ಮತ್ತು ಪೌಷ್ಟಿಕಾಂಶ ಹೊಂದಿರುವ ಆಹಾರವನ್ನು ಸೇವಿಸಿ ತಾವು ಮತ್ತು ತಮ್ಮ ಗರ್ಭದಲ್ಲಿರುವ ಮಗುವನ್ನು ಪೋಷಣೆ ಮಾಡಬೇಕು ಎಂದು ಹೇಳಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿ, ಮಹಿಳೆಯರು ತಮ್ಮ ಜತೆಗೆ ಮಕ್ಕಳನ್ನೂ ಆರೋಗ್ಯವಂತರನ್ನಾಗಿಸುವ ಮೂಲಕ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು. ಅಪೌಷ್ಟಿಕತೆ ನಿವಾರಿಸುವಲ್ಲಿ ಕೇಂದ್ರ ಸರ್ಕಾರ ಆಯೋಜಿಸಿರುವ ರಾಷ್ಟ್ರೀಯ ಪೋಷಣ್ ಅಭಿಯಾನ ಒಂದು ಮಹತ್ತರ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ನೆರವೇರಿಸಲಾಯಿತು. ಸಿಡಿಪಿಓ ಮೃತ್ಯುಂಜಯ ಗುಡ್ಡದ ಅನ್ವೇರಿ, ವಲಯ ಮೇಲ್ವಿಚಾರಕಿಂಯರು, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಇದ್ದರು.

## ಸಾಕ್ಷಿ ಸುಭಾಷಿತ

**ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ ಹೃದಯದಿಂದ ಕೇಳಿಸಿಕೊಳ್ಳಿ**

**–ಸುಭಾಷಿತ**

## ಸಂಪಾದಕೀಯ

# ಬಿಜೆಪಿ ದ್ವಿಮುಖ ನೀತಿ ಅನಾವರಣ

ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಮೀಸಲಾತಿ ವಿಚಾರವಾಗಿ ಅಮೆರಿಕದಲ್ಲಿ ನೀಡಿರುವ ಹೇಳಿಕೆಯನ್ನು ಖಂಡಿಸಿ ಬಿಜೆಪಿ ಬೀದಿಗಿಳಿದು ಪ್ರತಿಭಟನೆ ನಡೆಸಿದೆ. ರಾಹುಲ್ ಗಾಂಧಿ ಮೀಸಲಾತಿಯ ವಿರೋಧಿ ಎನ್ನುವ ಬಿಜೆಪಿ ನಾಯಕರ ಆರೋಪ ಅವರ ದ್ವಿಮುಖ ನೀತಿಯನ್ನ ತೋರಿಸುತ್ತದೆ.

ಸಂವಿಧಾನವನ್ನ ಬದಲಿಸಲು ಹೊರಟ ಪಕ್ಷದವರು, ಕರ್ನಾಟಕದಲ್ಲಿ ಅಲ್ಪಸಂಖ್ಯಾತರಿಗೆ ನೀಡಿದ ಮೀಸಲಾತಿಯನ್ನು ರದ್ದು ಪಡಿಸಿದ ಪಕ್ಷದ ನಾಯಕರು, ಇವತ್ತು ಸಮಾನತೆಯ ವಿಚಾರ ಬಂದಾಗ ರಾಹುಲ್ ಗಾಂಧಿಗೆ ದಲಿತ ವಿರೋಧಿ, ಮೀಸಲಾತಿ ವಿರೋಧಿ ಹಣೆಪಟ್ಟಿ ಕಟ್ಟುತ್ತಿದ್ದಾರೆ.

ರಾಹುಲ್ ಗಾಂಧಿ ಹೇಳಿಕೆಯನ್ನ ಸರಿಯಾಗಿ ಅರ್ಥ ಮಾಡಿಕೊಂಡರು, ತಪ್ಪಾಗಿ ಅರ್ಥೈಸಿಕೊಂಡವರಂತೆ ನಟಿಸಿ, ಬೀದಿಗಿಳಿದು ನಾಟಕ ಮಾಡಿದ್ದಾರೆ. ಶೋಷಿತರು ಮೀಸಲಾತಿ ಸೌಲಭ್ಯ ಪಡೆದು, ಎಲ್ಲರಂತೆ ಸಮಾನ ಅವಕಾಶಗಳನ್ನು ಪಡೆದಾಗ ಮೀಸಲಾತಿಯನ್ನು ರದ್ದುಪಡಿಸಬಹುದು. ಆದರೆ ಅಂತಹ ಸ್ಥಿತಿ ಸದ್ಯಕ್ಕೆ ಇಲ್ಲ ಎನ್ನುವುದು ರಾಹುಲ್ ಗಾಂಧಿ ಹೇಳಿಕೆಯ ಸಾರಾಂಶ.

ಅಂದರೆ ಎಲ್ಲರಿಗೂ ಸಮಾನ ಅವಕಾಶ ಸಿಗುವವರೆಗೂ ಮೀಸಲಾತಿ ವ್ಯವಸ್ಥೆ ಮುಂದುವರೆಯುತ್ತದೆ ಎನ್ನುವುದೇ ಆಗಿದೆ. ಇಂತಹ ಒಂದು ಸಣ್ಣ ಹೇಳಿಕೆಯನ್ನ ಉದ್ದೇಶಪೂರ್ವಕವಾಗಿ, ರಾಜಕೀಯ ಲಾಭಕ್ಕಾಗಿ ತಿರುಚಿ ಹೋರಾಟದ ಹಾದಿ ಹಿಡಿದರು ಹಾಸ್ಯಸ್ಪದ ಎನಿಸಿಕೊಳ್ಳುತ್ತದೆ.

ಬಿಜೆಪಿ ನಾಯಕರಿಗೆ ಮೀಸಲಾತಿ ಬಗ್ಗೆ ನಿಜವಾಗಿಯೂ ಕಳಕಳಿ ಇದ್ದರೆ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ನಿರ್ಧಾರ ಕೈಗೊಳ್ಳಲಿ. ಬಿಜೆಪಿ ನಿಜವಾಗಿಯೂ ಮಿಸಲಾತಿ ವಿರೋಧಿ ಪಕ್ಷ ಎನ್ನುವ ಕಾರಣಕ್ಕೆ ಶೋಷಿತ ಸಮುದಾಯ ಕಾಂಗ್ರೆಸ್ ಬೆಂಬಲಿಸಿತು.

ಕಾಂಗ್ರೆಸ್ ನಿಲುವುಗಳು, ರಾಹುಲ್ ಗಾಂಧಿ ವಿದೇಶದಲ್ಲಿ ಆಡಿದ ವಿಷಯಗಳನ್ನು ಒಪ್ಪಿಕೊಳ್ಳಲು ಸಾಧ್ಯವೂ ಇಲ್ಲ. ಆ ಬಗ್ಗೆಯೂ ವಿಜಯಸಾಕ್ಷಿ ಆಕ್ಷೇಪಣೆಯನ್ನು ವ್ಯಕ್ತಪಡಿಸಿದೆ. ಅದೇ ರೀತಿ ಮೀಸಲಾತಿ ಕುರಿತಾದ ಹೇಳಿಕೆಗೆ ಬಿಜೆಪಿಯ ಪ್ರತಿಭಟನೆಯೂ ಸರ್ವ ಸಮ್ಮತವಲ್ಲ.

## ಮರುಳ ಸಿದ್ದಪ್ಪ ದೊಡ್ಡಮನಿಯವರ ಶಾಯಿರಿ ಸಂಕಲನದ ಪರಿಚಯ

# ‘ಎದೆಯಾಗಿನ ಮಾತು’

ಈಗಾಗಲೇ ‘ಮರುಳನ ಶಾಯಿರಿ ಲೋಕ’ ಎಂಬ ಶಾಯಿರಿ ಸಂಕಲನದ ಮೂಲಕ ಶಾಯಿರಿ ಕವಿಯೆಂದು ಹೆಸರಾದವರು ಹುಲಕೋಟಿಯ ಮರುಳಸಿದ್ದಪ್ಪ ದೊಡ್ಡಮನಿ. ಅವರ ‘ಮರುಳನ ಶಾಯಿರಿ’ ಲೋಕದ ಗುಂಗು ತಲೆಯಿಂದ ಮಾಸದಿರುವಾಗಲೇ, ಈ ಕವಿ ಎರಡನೆಯ ಶಾಯಿರಿ ಸಂಕಲನವನ್ನು ಓದುಗರ ಎದೆಗೆ ಇತ್ತಿದ್ದಾರೆ. ಕನ್ನಡದಲ್ಲಿ ಶಾಂತರಸ, ಇಟಗಿ ಈರಣ್ಣ, ಎಸ್.ಜಿ. ಸ್ವಾಮಿ, ಅಸಾದುಲ್ಲಾ ಬೇಗ್ ಮೊದಲಾದ ಹಿರಿಯರಿಂದ ಬರೆಯಲು ಶುರು ಹಚ್ಚಿಕೊಂಡು ಈ ಕಾವ್ಯ ಪ್ರಕಾರದಲ್ಲಿ ನಂತರದಲ್ಲಿ ಶಹಾಪೂರದ ಡಾ. ಗುರುರಾಜ ಅರಕೇರಿ, ಕೃಷ್ಣಮೂರ್ತಿ ಕುಲಕರ್ಣಿ, ಮರುಳಸಿದ್ದಪ್ಪ ದೊಡ್ಡಮನಿ, ಡಾ. ಸಿದ್ದರಾಮ ಹೊನ್ಕಲ್, ಡಾ.ಮಲ್ಲಿನಾಥ ತಳವಾರ, ಪರಮೇಶ್ವರಪ್ಪ ಕುದರಿ ಮೊದಲಾದವರು ಶಾಯಿರಿ ಬರೆಯುತ್ತಿದ್ದಾರೆ.




ಹೆಸರೇ ಹೇಳುವಂತೆ ‘ಎದೆಯಾಗಿನ ಮಾತು’ 94 ಶಾಯಿರಿಗಳ ಗುಚ್ಛ. ಪ್ರೀತಿಯೊಂದನು ಬಿಟ್ಟು ಇಲ್ಲಿ ಬೇರೇನೂ ಸಿಗಲಾರದು. ಅಪರೂಕ್ಕೊಮ್ಮೊಮ್ಮೆ ಭಿನ್ನ ವಿಷಯಗಳು ಬಂದರೂ ಅವು ಇಲ್ಲವೆನ್ನುವಷ್ಟು ಕಡಿಮೆ. ತನಗೊಲಿದವಳ ರೂಪವರ್ಣನೆ, ಅವಳ ಪ್ರೀತಿಯ ವರ್ಣನೆ, ಅವಳು ಕೋಪಗೊಂಡಾಗಿನ ಕೋಪ ವರ್ಣನೆ, ಅಗಲಿದಾಗಿನ ವಿರಹ ವರ್ಣನೆ ಇವೇ ಮುಂದಾಗಿವೆ. ‘ಪ್ರೀತಿ ಅನ್ನು ಮಧು ಕುಡದಿನಿ, ಅದರ ನಿಶೆನ ಇಳಿಯಾಂಗಿಲ್ಲ’ ಎನ್ನುವ ಕವಿ ಅದರ ನಶೆಯಲ್ಲಿಯೆ ಮುಳುಗಿದ್ದಾನೆ. ಎಲ್ಲ ರೋಗಕ್ಕೂ ಪ್ರೀತಿಯೇ ಮದ್ದು ಎನ್ನುವ ನಂಬಿಗೆ ಅವನದು.

ನನ್ನ ಬ್ಯಾನಿಗೆ ಎಷ್ಟು ಔಷದ ಹಚ್ಚಿದರೂ<br>
ಅದು ಮಾಯಂಗಿಲ್ಲ<br>
ಪ್ರೀತಿ ಅನ್ನು ಔಷದ ಕುಡಸಿದರ<br>
ಅದು ಹೊಳ್ಳಿ ಬರಂಗಿಲ್ಲ

ಎಂದು ಭದ್ರವಾಗಿ ನಂಬಿದ್ದಾನೆ. ಅವನಿಗೆ ಗೊತ್ತಾಗಿ ಹೋಗಿದೆ, ಪ್ರೀತಿ ಯಾರೂ ಈಜಿ ಮುಗಿಸಲಾರದ ಸಾಗರ ಎನ್ನುವದು. ಆದ್ದರಿಂದಲೇ ಕವಿ

ಪ್ರೀತಿ ಸಮುದ್ರದ ಆಳ<br>
ಯಾರಿಗೂ ತಿಳಿಯಾಂಗಿಲ್ಲ<br>
ಅದರಾಗ ಮುಳುಗಿದ್ರ<br>
ಮ್ಯಾಲೇಳುದು ಸಾಧ್ಯನ ಇಲ್ಲ

ಎಂದು ಸಾರುತ್ತಾನೆ. ಮುಳುಗಿದವನನ್ನು ಉದ್ಧರಿಸುವ ಪ್ರೀತಿಯೇ ಒಮ್ಮೊಮ್ಮೆ ಮುಳುಗಿಸುವ, ಭೋರ್ಗರೆವ ಸಾಗರವೂ ಆಗುತ್ತದೆ. ಅವಳ ಪ್ರೀತಿಯ ಅಗಾಧತೆಯ ಅರಿವೂ ಕವಿಗಿದೆ. ನಿಜ ಪ್ರೀತಿಯೇ ಹಾಗೆ. ಅದನ್ನು ತಡೆವವರು ಯಾರೂ ಇಲ್ಲ. ಎದೆಯ ಹೊಳೆಯಲ್ಲಿ ಉಕ್ಕುವ ಪ್ರವಾಹವನ್ನು ಯಾರೂ ತಡೆಯಲಾರರು ಎಂಬ ವಿಶ್ವಾಸ ಕವಿಯದು.

ಪ್ರೀತಿ ಎಲ್ಲ ಕಾಲಕ್ಕೂ ಖುಷಿಯನ್ನಷ್ಟೇ ಕೊಡದು. ಅಗಲಿಕೆಯಿಂದ ನೋವುಂಟುಮಾಡುತ್ತದೆ. ಪ್ರೀತಿಸಿದವರು ನೋವು ಅನುಭವಿಸಲೂ ಸಿದ್ಧರಿರಲೇಬೇಕು. ಇಹದ ಈ ಲೋಕದಲ್ಲಿ ಸಾಧ್ಯವಾಗದಿದ್ದರೆ ಕಡೆಗೆ ಆ ಪರಲೋಕಕ್ಕೆ ಹೋಗಿಯಾದರೂ ಅವಳ ಕೈ ಹಿಡಿಯುತ್ತೇನೆ ಎನ್ನುವ ಸಾಲುಗಳಿಗೆ ಏನು ವ್ಯಾಖ್ಯಾನ ಬರೆಯುವದು? ಮೌನದಲಿ ಓದಿ ಅನುಭವಿಸಬೇಕಷ್ಟೇ.

ನನ್ನ ಎದಿ ತುಂಬ<br>
ನಿನ್ನ ಹೆಸರ ಬರೆಸಿನಿ<br>
ಈ ಜೀವ ಇರುತನಾ ನಿನ್ನ ನಿನ್ನ ಉಸಿರಾಗಿರ್ತಿನಿ<br>
ಹೆಸರು ಉಸಿರು ಒಂದಾದರ<br>
ಸ್ವರ್ಗದಾಗ ನಿನ್ನ ಕೈ ಹಿಡಿತೆನಿ

ಹೀಗೆ ಪ್ರತಿ ಸಾಲಲ್ಲೂ ತಮ್ಮ ಎದೆಯ ಪ್ರೀತಿ ಹಂಬಲವನ್ನೇ ಶಾಯಿರಿಯಾಗಿಸಿದ ಕವಿ ಮರುಳಸಿದ್ದಪ್ಪನವರ ಈ ಸಂಕಲನದ ತುಂಬ ಮನದ ಮಾತುಗಳೇ ಇವೆ. ಪ್ರೀತಿಯಾಚೆಗಿನ ಲೋಕ ಇಲ್ಲಿ ಇಲ್ಲವೆನ್ನುವಷ್ಟು ಕಡಿಮೆ. ನಗೆಯೊಂದೆ ಜಗತ್ತಿನ ಎಲ್ಲನೋವಿಗೆ ಉತ್ತರ ಎನ್ನುವ ಕವಿ ‘ನಕ್ಕಾಂವ ಗೆದ್ದಾಂವ’ ಎಂಬ ಕವಿವಾಣಿಗೆ ಜೈ ಎನ್ನುತ್ತಾರೆ.

ನಿಸರ್ಗದ ಕೆಲವು ವಿಸ್ತರದ ಸತ್ಯಗಳನ್ನು ಹೇಳುವ ಕವಿ ‘ಆಕಾಶಕ ಕಣ್ಣೀರ ಬಂದ್ರ ಯಾರಿಗೂ ತಡಿಯಾಕಾಂಗಿಲ್ಲ, ಸಮುದ್ರಕ್ಕ ತೆರಿ ಬಂದ್ರ ತಡಿಯಾಕಾಗಂಗಿಲ್ಲ. ಭೂಮಿಗಿ ನಿದ್ದಿ ಬಂದ್ರಾದಕ ಜಾಗಾನ ಇಲ್ಲ’ ಎನ್ನುವ ಸಾಲುಗಳಲ್ಲಿ ಅದನ್ನು ಚಿತ್ರಿಸುತ್ತಾರೆ. ವಿಷಯ ವಸ್ತು ಒಂದೆ ಆದಾಗ, ಹೇಳುವ ಶೈಲಿ ಭಾಷೆ ಒಂದೇ ಆದಾಗ ಕೆಲವು ಸಾಲು ಪುನರುಕ್ತ ಆದಂತೆ ಆಗುವದು ಸಹಜ. ಅಂಥ ಭಾವನೆ ಒಂದೆರಡು ಕಡೆ ಬಾರದಿರದು.

ಪ್ರೀತಿ ಅದರ ಸಾವಿರ ಸಾವಿರ ಭಾವಗಳನ್ನು ಎದಿಯಲ್ಲಿ ತುಂಬಿಕೊಂಡ ಈ ಪ್ರೀತಿಯ ರಾಯಭಾರಿ ಕವಿ ಅದನ್ನೆಲ್ಲ ‘ಎದೆಯ ಮಾತಾ’ಗಿ ಹರಿಸಿದ್ದಾರೆ. ನಮ್ಮೆದೆಗೂ ಆ ಮಾತು ತಾಗಿ ನಮ್ಮೆದೆಗಳೂ ದ್ರವಿಸುತ್ತವೆ. ಅವರ ಈ ಪ್ರೀತಿಯ ಯಾನ ಮುಂದುವರೆಯಲಿ ಎಂಬ ಬಯಕೆ, ಹಾರೈಕೆ ನನ್ನದೂ ಆಗಿದೆ.

## ಸೆ. 19 ರಂದು ತಾಲೂಕ ಮಟ್ಟದ ತ್ರೈಮಾಸಿಕ ಗ್ಯಾರಂಟಿ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕ ಮಟ್ಟದ ತ್ರೈಮಾಸಿಕ ಗ್ಯಾರಂಟಿ ಸಭೆಯನ್ನು ಗದಗ ತಾಲೂಕ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ಇವರ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 11 ಗಂಟೆಗೆ



ಜಿಲ್ಲಾ ಪಂಚಾಯತ ವ್ಹಿ.ಸಿ. ಹಾಲ್‌ನಲ್ಲಿ ಏರ್ಪಡಿಸಲಾಗಿದೆ. ಈ ಸಭೆಗೆ ಸಮಿತಿಯ ಸದಸ್ಯರು ಹಾಗೂ ವಿಶೇಷ ಆಹ್ವಾನಿತರು ಸಕಾಲದಲ್ಲಿ ಉಪಸ್ಥಿತರಿರಲು ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರಾದ ಸಿದ್ದಲಿಂಗೇಶ್ವರ ಅಜ್ಜಣ್ಣ ಪಾಟೀಲ್ ಇವರ ಸಹೋದರ ದಿ. ಚನ್ನವೀರಗೌಡ ಅಜ್ಜಣ್ಣ ಪಾಟೀಲ್ ಇವರ ಸ್ಮರಣಾರ್ಥವಾಗಿ ಲಕ್ಕುಂಡಿಯಲ್ಲಿ ‘ಚನ್ನವೀರಧಾಮ’ ತೋಟವನ್ನು ಪ್ರವಾಸೋದ್ಯಮ ಸಚಿವ ಎಚ್ .ಕೆ .ಪಾಟೀಲ್ ಉದ್ಘಾಟಿಸಿದರು. ಇದೇ ವೇಳೆ ಶಾಸಕ ಸಿ. ಸಿ. ಪಾಟೀಲ್ , ಎಸ್.ವಿ. ಸಂಕನೂರು, ಮಾಜಿ ಶಾಸಕ ಡಿ. ಆರ್ ಪಾಟೀಲ ಪಾಲ್ಗೊಂಡಿದ್ದರು.

## ಚಾರಿತ್ರ್ಯ ಬೋಧನೆ ಆರಂಭ

**■ ವಿಜಯಸಾಕ್ಷಿ ಸುದ್ದಿ, ಗದಗ**



ಕರ್ನಾಟಕ ರಾಜ್ಯ ಘಟಕದ ವತಿಯಿಂದ ‘ಪ್ರವಾದಿ ಮುಹಮ್ಮದ್(ಸ) ಮಹಾನ್ ಚಾರಿತ್ರ್ಯವಂತ’ ಎಂಬ ಧ್ಯೇಯವಾಕ್ಯದಡಿ ರಾಜ್ಯವ್ಯಾಪಿ ಅಭಿಯಾನವನ್ನು ಸೆಪ್ಟೆಂಬರ್ 13ರಿಂದ 22ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಮುನ್ನಾ ಕಲ್ಮನಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರವಾದಿ ಮುಹಮ್ಮದ್(ಸ)ರ ಜೀವನ ಮತ್ತು ಸಂದೇಶವು ಸಾರ್ವಕಾಲಿಕ ಮತ್ತು ಸಾರ್ವತ್ರಿಕವಾದುದು. ಅವರ ಜೀವನ ಮತ್ತು ಸಾಧನೆಗಳು ಎಲ್ಲಾ ಧರ್ಮಗಳ ಜ್ಞಾನಿಗಳ ಮೆಚ್ಚುಗೆಯನ್ನೂ ಜಗತ್ತಿನಾದ್ಯಂತ ಜನಮನ್ನಣೆಯನ್ನೂ ಗಳಿಸಿದೆ. ಅವರ ಮೇಲೆ ಅವತೀರ್ಣಗೊಂಡ ದೈವಿಕ ಗ್ರಂಥ ಪವಿತ್ರ ಕುರ್‌ಆನ್ ಮತ್ತು ಅವರ ಬೋಧನೆಗಳಾದ ಹದೀಸ್‌ಗಳು ಅಧಿಕೃತವಾಗಿ ಸಂರಕ್ಷಿಸಲ್ಪಟ್ಟಿದ್ದು ಇಂದಿಗೂ ಅವು ಪ್ರಸ್ತುತವಾಗಿವೆ.

ಅಭಿಯಾನದ ಅಂಗವಾಗಿ ರಾಜ್ಯದ ವಿವಿಧೆಡೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಪ್ರವಾದಿ ಮುಹಮ್ಮದರ ಬಗ್ಗೆ ಜಗತ್ತಿನ ಪ್ರಸಿದ್ಧ ದಾರ್ಶನಿಕರ ಅನಿಸಿಕೆಗಳು ಮತ್ತು ಹೆಸರಾಂತ ಬುದ್ಧಿಜೀವಿಗಳು ಬರೆದಿರುವ ಲೇಖನ ಸಂಕಲನದ ಪುಸ್ತಕಗಳನ್ನು ಹೊರತರಲಾಗುವುದು. ರಾಜ್ಯಾದ್ಯಂತ ಬೃಹತ್ ಸಮ್ಮೇಳನಗಳು, ವಿಚಾರಗೋಷ್ಠಿಗಳು, ಸಂವಾದ ಕಾರ್ಯಕ್ರಗಳು, ಸಾಮಾಜಿಕ ಸೇವಾ ಕಾರ್ಯಗಳು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಪ್ರಬಂಧ ಸ್ಪರ್ಧೆ ಮತ್ತು ಕ್ವಿಝ್ ಸ್ಪರ್ಧೆ ಸೇರಿದಂತೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣೇಶನಿಗೆ ಪೂಜೆ ಸಲ್ಲಿಸಿದ ಸಂಕನೂರ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಎ.ಪಿ.ಎಂ.ಸಿ ಯಾರ್ಡ್‌ನಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಿರುವ ಗಣೇಶನಿಗೆ ಗುರುವಾರ ಸಂಜೆ ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನಿತೀಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ಗುಂಡಪ್ಪನವರ, ವಿನಯ ಕಾಡಪ್ಪನವರ, ಮುತ್ತಣ್ಣ ಅಂಗಡಿ, ರಾಜು ಕುರಡಗಿ, ಅಶೋಕ ಸಂಕಣ್ಣವರ, ಈರಣ್ಣ ಬಾಳಿಕಾಯಿ, ವೀರುಪಾಕ್ಷಗೌಡ ದೇಸಾಯಿಗೌಡ್ರ, ಶಿವಯ್ಯ ನಲ್ವತ್ವಾಡಮಠ ಮಂಜುನಾಥ ಬೇಲೆರಿ, ಶರಣಪ್ಪ ಹೊಂಬಳ, ರೇಷ್ಮಾ ಟ್ರೇಡಿಂಗ್ ಕಂಪನಿ, ಕಾಂತು ಅಂಗಡಿ, ಬಸವರಾಜ ಅಂಗಡಿ, ಅಜಿತ ಪುಣೇಕರ, ಮಂಜುನಾಥ ಕವಲೂರ ಹಾಗೂ ಸಂಘದ ಪದಾಧಿಕಾರಿಗಳು ಇದ್ದರು.

## ಮಹಿಳೆಯರು ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಿ: ಪಿಡಿಓ ಅಶೋಕ ರಾಂಪುರ

**■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ತಾಲ್ಲೂಕಿನ ಹಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಶ್ರೀ ಸುರಕ್ಷ ಸಂಜೀವಿನಿ ಒಕ್ಕೂಟದ 2ನೇ ಹಂತದ ದೂರದೃಷ್ಟಿ ಮತ್ತು ವ್ಯಾಪಾರ ಅಭಿವೃದ್ಧಿ ಯೋಜನೆಯಿಂದ ಮಹಿಳೆಯರು ಸ್ವಾವಲಂಬನೆ ಬದುಕು ಕಟ್ಟಿಕೊಂಡು ಸಮಾಜದ ಮುನ್ನೆಲ್ಲೆಗೆ ಬರಬೇಕು ಎಂದು ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪುರ ಹೇಳಿದರು.



ತಾಲೂಕಿನ ಹಲಗೇರಿ ಗ್ರಾಮದಲ್ಲಿ ನಡೆದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪೂರ ದೂರದೃಷ್ಟಿ & ವ್ಯಾಪಾರ ಅಭಿವೃದ್ಧಿ ಯೋಜನೆ ತರಬೇತಿ, ಹಣಕಾಸು ನಿರ್ವಹಣೆಯ ತರಬೇತಿಗಳು ಸಂಜೀವಿನಿ ಒಕ್ಕೂಟಗಳಿಗೆ ನೀಡಿ, ಸಾಮರ್ಥ್ಯ ಬಲವರ್ಧನೆ ಮಾಡುತ್ತಿರುವುದು ಸಂತಸ ವಿಷಯ, ಸದರಿ ತರಬೇತಿಗಳಿಂದ ಸಂಘದ ಮಹಿಳೆಯರು ಸಾವಲಂಬಿಗಳಾಗಲೆಂದು ಎಂದರು.

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆ.15 ರಂದು ಬೆ.9.00 ರಿಂದ 10.00ರವರೆಗೆ ತಾಲೂಕಿನ ಬೆಳಗಟ್ಟಿ ಗ್ರಾಮದಿಂದ ಆರಂಭಗೊಂಡು ಮುನಿರಾಬಾದ್ ಡ್ಯಾಂ ದವರೆಗೆ ಒಟ್ಟು 54.9 ಕಿ.ಮೀ ಉದ್ದದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಮಾನವ ಸರಪಳಿ ನಿರ್ಮಿಸಲಾಗುವುದು. ಸದರಿ ಮಾನವ ಸರಪಳಿಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ತ್ರಿಭುವನೇಶ್ವರಿ, ಸಂಜೀವಿನಿ ಯೋಜನೆಯ ವಲಯ ಮೇಲ್ವಿಚಾರಕ ವೆಂಕಟೇಶ, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ಈರಣ್ಣ, ಬಸವರಾಜ & ಶೋಭಾ, ತಾಲೂಕ ಸಂಪನ್ಮೂಲ ವ್ಯಕ್ತಿಗಳಾದ ಅನ್ನಪೂರ್ಣ, ಸಲೀಮಾ, ಒಕ್ಕೂಟದ ಅಧ್ಯಕ್ಷೆ ಪಾರ್ವತಿ, ಕಾರ್ಯದರ್ಶಿ ಭಾಗ್ಯಮ್ಮ, ಖಜಾಂಚಿ ಲಲಿತಮ್ಮ, ಒಕ್ಕೂಟದ ಒಃಎ, ಐಅಖಕ, ಕೃಷಿ & ಪಶು ಸಖಿ, ಬಿಸಿ ಸಖಿ ಹಾಗೂ ಒಕ್ಕೂಟ ಸರ್ವ ಪದಾಧಿಕಾರಿಗಳು ಹಾಗೂ ಸಂಘದ ಸದಸ್ಯರುಗಳು ಹಾಜರಿದ್ದರು.

## ನೇಮಕಾತಿ ನಿಯಮಗಳಿಗೆ ಆಕ್ಷೇಪಣೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಾರ್ವಜನಿಕ ಶಿಕ್ಷಣ ಇಲಾಖೆಯ ನೇಮಕಾತಿ ತಿದ್ದುಪಡಿ ಕರಡು ನಿಯಮಗಳಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಲಕ್ಷ್ಮೇಶ್ವರ ಶಾಖೆ, ಕ.ರಾ.ಪ್ರಾ. ಶಾಲಾ ಶಿಕ್ಷಕರ ಸಂಘ ಲಕ್ಷ್ಮೇಶ್ವರ, ಕ.ರಾ.ಸ. ಪ್ರಾಥಮಿಕ ಶಾಲಾ ಪದವೀಧರ ಶಿಕ್ಷಕರ ಸಂಘ ಲಕ್ಷ್ಮೇಶ್ವರ ಘಟಕ ಹಾಗೂ ತಾಲೂಕಿನ ಎಲ್ಲಾ ಶೈಕ್ಷಣಿಕ ಸಂಘಗಳ ವತಿಯಿಂದ ಬುಧವಾರ ಆಕ್ಷೇಪಣೆ ಸಲ್ಲಿಸಿದರು.

ತಾಲೂಕಿನ ಕಾರ್ಯನಿರತ 1ರಿಂದ 7/8ನೇ ತರಗತಿಗಳಿಗೆ ಬೋಧಿಸುವ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರಿಂದ, ಬಡ್ತಿ ವಂಚಿತ ಮುಖ್ಯೋಪಾಧ್ಯಾಯರಿಂದ ಹಾಗೂ ವರ್ಗಾವಣೆ ವಂಚಿತ ಶಿಕ್ಷಕರಿಂದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಾಲೂಕಿನ 323 ಶಿಕ್ಷಕರ ಆಕ್ಷೇಪಣೆಗಳ ಮನವಿಗಳನ್ನು ಅಂಚೆಯ ಮೂಲಕ ರವಾನಿಸಿದರು.

ಈ ಸಂದರ್ಭದಲ್ಲಿ ಸಂಘದ ತಾಲೂಕಾಧ್ಯಕ್ಷ ಡಿ.ಎಚ್. ಪಾಟೀಲ ಹಾಗೂ ಕಾರ್ಯದರ್ಶಿ ಎಮ್.ಎ. ನದಾಫ್ ಮಾತನಾಡಿದರು. ಸಂಘದ ಅಧ್ಯಕ್ಷ ಎಮ್.ಡಿ. ವಾರದ ಹಾಗೂ ಪ್ರಧಾನ ಕಾರ್ಯದರ್ಶಿ ಬಿ.ಎಮ್. ಯರಗುಪ್ಪಿ ಮಾತನಾಡಿ, 1–5ರ ಶಿಕ್ಷಕರು ಎಂದು ಪದನಾಮ ಮಾಡಿ ಹಿಂಬಡ್ತಿ ನೀಡಿ ಪ್ರಸ್ತುತ 41300–81800ರ ವೇತನ ಶ್ರೇಣಿಗೆ ಸೀಮಿತಗೊಳಿಸಲಾಗಿದೆ. ಸದರಿ ಶಿಕ್ಷಕರಿಗೆ ಮುಂದಿನ ಬಡ್ತಿ ಜಿಪಿಟಿಗೆ ಎಂದು ಹೇಳಲಾಗುತ್ತಿದೆ. ಈ ಕ್ರಮದಿಂದ ಸೇವಾನಿರತರಿಗೆ ಬಹು ದೊಡ್ಡ ಅನ್ಯಾಯವಾಗುವುದರ ಜೊತೆಗೆ ಬಡ್ತಿ ನಿಯಮಗಳ ಸ್ಪಷ್ಟ ಉಲ್ಲಂಘನೆಯೂ ಆಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಿ.ಎಸ್. ನೇಕಾರ, ಬಿ.ಬಿ. ಯತ್ತಿನಹಳ್ಳಿ, ಎಸ್. ಎಮ್. ಬೋಮಲೆ, ಎಮ್.ಎಸ್. ಚಾಕಲಬ್ಬಿ, ಪಿ.ಪಿ. ಹಿರೇಮಠ, ಎಮ್.ಎಸ್. ಹಿರೇಮಠ, ಎಫ್.ಪಿ. ಡಂಬಳ ಹಾಗೂ ವಿವಿಧ ಶೈಕ್ಷಣಿಕ ಸಂಘಗಳ ಪದಾಧಿಕಾರಿಗಳು ಹಾಜರಿದ್ದರು.

## ರೋಟರಿ ಕ್ಲಬ್‌ನ ಸಾಪ್ತಾಹಿಕ ಸಭೆಯಲ್ಲಿ ಆರ್.ಎಸ್. ಬುರಡಿ

# ಓದುವ ಹವ್ಯಾಸದಿಂದ ಜ್ಞಾನದ ವಿಕಾಸ

**■ ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತಮ ಪುಸ್ತಕಗಳ ಓದು ನಮ್ಮ ಬದುಕನ್ನು ಪರಿಪೂರ್ಣಗೊಳಿಸುತ್ತದೆ ಹಾಗೂ ನಮ್ಮನ್ನು ಸದೃಢರನ್ನಾಗಿಸುತ್ತದೆ. ಓದುವ ಹವ್ಯಾಸ ಅದು ನಮ್ಮ ಜ್ಞಾನದ ವಿಕಾಸ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್. ಎಸ್. ಬುರಡಿ ಹೇಳಿದರು.

ಅವರು ಗದಗ–ಬೆಟಗೇರಿ ರೋಟರಿ ಕ್ಲಬ್‌ನ ಸಾಪ್ತಾಹಿಕ ಸಭೆಯಲ್ಲಿ ಪುಸ್ತಕಗಳ ಮಹತ್ವದ ಕುರಿತು ಮಾತನಾಡಿ, ಮಕ್ಕಳಲ್ಲಿ ಹಾಗೂ ಯುವ ಪೀಳಿಗೆಯಲ್ಲಿ ಓದಿನ ಅಭಿರುಚಿ ಹೆಚ್ಚಿಸಲು ಹಳೆಯ ಹಾಗೂ ಹೊಸ ಪುಸ್ತಕಗಳ ಸಂಗ್ರಹ ಕಾರ್ಯ ನಡೆಯಬೇಕು. ಅಂದಾಗ ಮಕ್ಕಳಲ್ಲಿ ಓದುವ ಹವ್ಯಾಸ ಹಾಗೂ ಕುತೂಹಲ ಮೂಡಿ ಬರುತ್ತದೆ ಎಂದರು.




ಗದುಗಿನ ಕೃಷಿ ಇಲಾಖೆಯ ನಿವೃತ್ತ ಅಧಿಕಾರಿ ಸುರೇಶ ಕುಂಬಾರ ಮಾತನಾಡಿ, ವ್ಯವಸಾಯ ನಮ್ಮೆಲ್ಲರ ಮೂಲ ಕಸಬು. ಆಧುನಿಕತೆಯೊಂದಿಗೆ ತಂತ್ರಜ್ಞಾನವನ್ನು ಬಳಸಿಕೊಂಡು ಭೂಮಿ ತಾಯಿಯ ಒಡಲು ಹೊನ್ನಿನ ಕಡಲಾಗಿಸಬಹುದು. ಹೀಗಾಗಿ ನಮ್ಮ ಹಿರಿಯರು ಮಣ್ಣನ್ನು ದೇವರೆಂದು ಪೂಜಿಸುತ್ತಿದ್ದರು ಎಂದರು.

ಡಿಡಿಪಿಐ ಆಗಿ ಬಡ್ತಿ ಪಡೆದ ನಿಮಿತ್ತ ಆರ್. ಎಸ್. ಬುರಡಿ ಹಾಗೂ ನಿವೃತ್ತಿ ಹೊಂದಿದ ಸುರೇಶ ಕುಂಬಾರರನ್ನು ಸನ್ಮಾನಿಸಲಾಯಿತು. ಶ್ರೀಧರ ಸುಲ್ತಾನಪೂರ ಸ್ವಾಗತಿಸಿದರು, ಕ್ಲಬ್ ಕಾರ್ಯದರ್ಶಿ ಸಂತೋಷ ಅಕ್ಕಿ ನಿರೂಪಿಸಿದರು, ಮಹಾಂತೇಶ ಬಾತಾಖಾನಿ ವಂದಿಸಿದರು.

ಕ್ಲಬ್ ಸದಸ್ಯರಾದ ವಿಶ್ವನಾಥ ಯಳಮಲಿ, ಚಂದ್ರಮೌಳಿ ಜಾಲಿ, ಡಾ. ಚಂದ್ರಶೇಖರ ಬಳ್ಳಾರಿ ಜನ್ಮದಿನ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕ್ಲಬ್‌ನ ಅಸಿಸ್ಟಂಟ್ ಗವರ್ನರ್ ಶಿವಾಚಾರ್ಯ ಹೊಸಳ್ಳಿಮಠ, ಚನ್ನವೀರ ಹುಣಶೀಕಟ್ಟಿ, ಡಾ. ಆರ್.ಎಸ್. ಬಳ್ಳಾರಿ, ಎಚ್. ಎಸ್. ಪಾಟೀಲ, ಡಾ. ಉಮೇಶ ಪುರದ, ಅಶೋಕ ಅಕ್ಕಿ, ಅರವಿಂದಸಿಂಗ್ ಬ್ಯಾಳಿ, ಡಾ. ಪ್ರದೀಪ ಉಗಲಾಟ, ಕಾರ್ತಿಕ ಮುತ್ತಿನಪೆಂಡಿಮಠ ಮುಂತಾದವರು ಉಪಸ್ಥಿತರಿದ್ದರು.

ಅಧ್ಯಕ್ಷತೆ ವಹಿಸಿದ್ದ ಕ್ಲಬ್ ಅಧ್ಯಕ್ಷ ಡಾ. ರೇವಣಶಿದ್ದೇಶ್ವರ ಉಪ್ಪಿನ ಮಾತನಾಡಿ, ಓದಿನ ಮಹತ್ವವನ್ನು ನಾವಿಂದು ಮರೆಯುತ್ತಿದ್ದೇವೆ. ಮೊಬೈಲ್–ಟಿವಿಗೆ ಮಕ್ಕಳು ಹೊಂದಿಕೊಂಡಿದ್ದಾರೆ. ಓದು ಬರಹವು ಮಕ್ಕಳಲ್ಲಿ ಹೆಚ್ಚಾಗಬೇಕು ಹಾಗೂ ಯುವಕರು ಕೃಷಿಯನ್ನೇ ಪ್ರಧಾನವಾಗಿ ಮಾಡಿಕೊಂಡು ಸೂಕ್ತ ಮಾರ್ಗದರ್ಶನದಲ್ಲಿ ಮುನ್ನಡೆಯಬೇಕು ಎಂದರು.

ಇಂದಿನಿಂದ ತಾಲೂಕಿನ ಎಲ್ಲ ಗ್ರಾ.ಪಂಗಳಲ್ಲಿ 'ಸ್ವಚ್ಛತೆಯೇ ಸೇವೆ' ಕಾರ್ಯಕ್ರಮ ಜಾರಿ

# ಗ್ರಾಮಗಳ ಸ್ವಚ್ಛತೆಗೆ ಪಾಕ್ಷಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮಗಳ ಪರಿಸರ ಆರೋಗ್ಯವಾಗಿದ್ದರೆ ಗ್ರಾಮಸ್ಥರ ಆರೋಗ್ಯ ಸದೃಢವಾಗಿರುತ್ತದೆ. ಗ್ರಾಮಗಳ ಪರಿಸರವೇ ಮಲೀನತೆಯಿಂದ ಇದ್ದರೆ ಆ ಗ್ರಾಮದ ಗ್ರಾಮಸ್ಥರೆಲ್ಲ ಸಾಂಕ್ರಾಮಿಕ ರೋಗಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚು. ಹೀಗಾಗಿ ಸೆಪ್ಟೆಂಬರ್ 14ರಿಂದ ಅಕ್ಟೋಬರ್ 2ರವರೆಗೆ ನರಗುಂದ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮಗಳಲ್ಲೂ ಸ್ವಚ್ಛತೆ ಮತ್ತು ನೈರ್ಮಲ್ಯದ ಕುರಿತು ತಿಳುವಳಿಕೆ ಮೂಡಿಸುವ ಕಾರಣದಿಂದ 'ಸ್ವಚ್ಛತಾ ಹೀ ಸೇವಾ ಪಾಕ್ಷಿಕ-2024'ರ ಆಂದೋಲನ ಮೂಲಕ ತರಹೇವಾರಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.

ನರಗುಂದ ತಾಲೂಕು ಪಂಚಾಯತಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಳ್ಳಿಗಳು ಅಭಿವೃದ್ಧಿಯಾದರೆ ನಾಡೆಲ್ಲ ಅಭಿವೃದ್ಧಿ ಎಂಬಂತೆ ನಾವು ಮೊದಲು ಗ್ರಾಮೀಣ



ಪ್ರದೇಶಗಳ ಅಭಿವೃದ್ಧಿಯತ್ತ ಚಿತ್ತ ಹರಿಸಬೇಕು. ಗ್ರಾಮಗಳ ಅಭಿವೃದ್ಧಿ ದೃಷ್ಟಿಕೋನದಿಂದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಆಂದೋಲನದಲ್ಲಿ ತಾಲೂಕಿನ ಗ್ರಾಮ ಪಂಚಾಯತ ವ್ಯಾಪ್ತಿಗಳಲ್ಲಿ ಗ್ರಾಮದ ಪ್ರವಾಸಿ ತಾಣಗಳಲ್ಲಿ ಮಾನವ ಸರಪಳಿ ಕಾರ್ಯಕ್ರಮ ಆಯೋಜಿಸಿ ಗ್ರಾಮದ ಶುಚಿತ್ವದ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಗ್ರಾಮದ ಕೆರೆ ಸುತ್ತ-ಮುತ್ತ, ಶಾಲಾ-ಕಾಲೇಜುಗಳ ಆವರಣ, ಆರೋಗ್ಯ ಕೇಂದ್ರಗಳು, ಸರ್ಕಾರಿ ಕಟ್ಟಡಗಳು ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಅರಣ್ಯ ಇಲಾಖೆ ಸಹಯೋಗದಲ್ಲಿ ಸಸಿ ನೆಡುವ ಕಾರ್ಯಕ್ರಮ ಆಯೋಜಿಸುವ ಮೂಲಕ ಪರಿಸರ ಸಂರಕ್ಷಣೆ ಜೊತೆಗೆ ಸ್ವಚ್ಛತೆಯ ಬಗ್ಗೆ ತಿಳುವಳಿಕೆ ಮೂಡಿಸಲಾಗುವುದು. ಶಾಲಾ-ಕಾಲೇಜುಗಳಲ್ಲಿ ತ್ಯಾಜ್ಯದಿಂದ ಕಲಾಕೃತಿ ರಚಿಸುವ ಹಾಗೂ ಚಿತ್ರಕಲೆ ಬಿಡಿಸುವ ಸ್ಪರ್ಧೆಗಳನ್ನು ಆಯೋಜಿಸಿ ಶಾಲಾ ಮಕ್ಕಳಲ್ಲಿ ಸ್ವಚ್ಛತೆಯ ಬಗ್ಗೆ ತಿಳುವಳಿಕೆ ಮೂಡಿಸಿ ಸ್ಪರ್ಧೆಯಲ್ಲಿ ಅತ್ಯುತ್ತಮವಾದ ಕಲಾಕೃತಿಗಳಿಗೆ ಬಹುಮಾನ ನೀಡಲಾಗುವುದು. ಈ ಮೂಲಕ ಗ್ರಾಮಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯದಿಂದ ಸಂಪತ್ತು ಮಾಡುವ ಕುರಿತು ಸ್ವ-ಸಹಾಯ ಸಂಘದ ಸದಸ್ಯರು ಮತ್ತು ಜಿಪಿಎಲ್‌ಎಫ್ ಸದಸ್ಯರ ಮೂಲಕ ಅರಿವು ಮೂಡಿಸುವ ಚಟುವಟಿಕೆಗಳನ್ನು ಆಯೋಜಿಸಲಾಗುತ್ತದೆ ಅಂತ ತಿಳಿಸಿದರು.

ಸ್ವಚ್ಛತಾ ಹೀ ಸೇವಾ ಅಭಿಯಾನದ ಅವಧಿಯಲ್ಲಿ ಆರೋಗ್ಯ ಇಲಾಖೆಯ ಸಹಭಾಗಿತ್ವದಲ್ಲಿ ಆರೋಗ್ಯ ತಪಾಸಣಾ ಶಿಬಿರ, ಆರೋಗ್ಯ ಕೇಂದ್ರಗಳು, ಪಂಚಾಯತಿ ಕಚೇರಿಗಳು, ಶಾಲಾ-ಕಾಲೇಜು, ಬಸ್ ನಿಲ್ದಾಣ ಹಾಗೂ ಇತರ ಸಾರ್ವಜನಿಕ ಸ್ಥಳಗಳಲ್ಲಿ ಸಮುದಾಯ ಶೌಚಾಲಯ ಬಳಕೆ ಮಾಡುವಂತೆ ಉತ್ತೇಜಿಸುವ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಶ್ರಮದಾನ ಕಾರ್ಯಕ್ರಮ ಆಯೋಜಿಸುವುದು ಮತ್ತು ಸ್ವಚ್ಛತಾ ಕಾರ್ಮಿಕರಿಗೆ ವಿವಿಧ ಇಲಾಖೆಯಡಿ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡುವುದು ಸೇರಿ ಇನ್ನಿತರ ಕಾರ್ಯಕ್ರಮ ಹಮ್ಮಿಕೊಳ್ಳಲು ತಾಲೂಕಿನ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದು ಮಾಹಿತಿ ನೀಡಿದರು.

## ಜಲ ಜೀವನ್ ಮಿಷನ್ ಕಾಮಗಾರಿ ಸಂಪೂರ್ಣ ಕಳಪೆ : ಹನುಮೇಶ ಆರೋಪ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ



ತಾಲೂಕಿನ ಇಂದರಗಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ 1130 ಮನೆಗಳ ನೀರು ಸಂಪರ್ಕ ಕಾಮಗಾರಿ ಸಂಪೂರ್ಣ ಕಳಪೆ ಮಟ್ಟದಲ್ಲಿ ನಡೆದಿದ್ದು ಕೂಡಲೇ ಕಾಮಗಾರಿ ಬಗ್ಗೆ ತನಿಖೆ ಮಾಡುವಂತೆ ಆರೋಪಿಸಿ ಜಿ.ಪಂ ಸಿಇಒ ರಾಹುಲ್ ರತ್ನಂ ಪಾಂಡೇ ಅವರಿಗೆ ಕರ್ನಾಟಕ ದಲಿತ ಸಂಘರ್ಷ ಸಮಿತಿ, ಬೀಮವಾದ, ತಾಲೂಕು ಸಂಚಾಲಕರು ಹನುಮೇಶ ಇಂದರಗಿ ಮನವಿ ಸಲ್ಲಿಸಿದ್ದಾರೆ.

2022-23ನೇ ಸಾಲಿನ ಜಲಜೀವನ್ ಮೀಷನ್ ಯೋಜನೆಯಡಿಯಲ್ಲಿ 1130 ಮನೆಗಳಿಗೆ ನೀರು ಸಂಪರ್ಕಿಸುವ ಕಾರ್ಯದಲ್ಲಿ ಕಳಪೆ ಮಟ್ಟದ ಕಾಮಗಾರಿ ನಡೆದಿದ್ದು, ಮನೆಗಳಿಗೆ ಸರಿಯಾದ ನೀರು ಸರಬರಾಜು ಆಗದೇ ಹಾಗೂ ಕೆಲ ಮನೆಗಳಿಗೆ ನೀರು ಸಂಪರ್ಕ ಮಾಡದೇ ಗುತ್ತಿಗೆದಾರರು ಬೋಗಸ್ ಬಿಲ್ ಮಾಡಿಕೊಂಡಿರುವುದು ಕಂಡು ಬಂದಿದೆ. ಬಂದು ಕಾಮಗಾರಿಯನ್ನು ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಒತ್ತಾಯಿಸಿದ್ದಾರೆ.

## ಪತ್ರಕರ್ತ ರಾಜು ಅಂಗಡಿ ನಿಧನ : ಕೆಯುಡಬ್ಲ್ಯೂಜೆ ಸಂತಾಪ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಟಿವಿ5 ವಾಹಿನಿಯ ಕ್ಯಾಮರಾಮೆನ ಆಗಿ ಕಾರ್ಯ ನಿರ್ವಹಿಸುತ್ತಿದ್ದ ರಾಜು ಅಂಗಡಿ ಅನಾರೋಗ್ಯದಿಂದ ಶುಕ್ರವಾರ ನಿಧನ ಹೊಂದಿದರು, ಅವರು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಸದಸ್ಯರಾಗಿದ್ದು ಜಿಲ್ಲೆಯಲ್ಲಿ ಕೆಲಸ ಮಾಡುತ್ತಿದ್ದರು, ಅವರ ನಿಧನಕ್ಕೆ ಶುಕ್ರವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಶ್ರದ್ಧಾಂಜಲಿ ಸಭೆ ನಡೆಯಿತು.

ಸಂಘದ ಜಿಲ್ಲಾಧ್ಯಕ್ಷ ಬಸವರಾಜ್ ಗುಡ್ಲಾನೂರ್ ಮಾತನಾಡಿ ಮೃತರ ಆತ್ಮಕ್ಕೆ ಶಾಂತಿ ಕೋರಿ ಅವರ ಕುಟುಂಬ ವರ್ಗಕ್ಕೆ ದುಃಖ ಭರಿಸುವ ಶಕ್ತಿ ದಯಪಾಲಿಸಲೆಂದು ಪ್ರಾರ್ಥಿಸಿದರು ,ಸಂಘದ ವತಿಯಿಂದ ಪರಿಹಾರ ಘೋಷಿಸಿದರು ಸ್ಥಳೀಯ ಶಾಸಕರಿಂದ ಮತ್ತು ರಾಜ್ಯ ಸಮಿತಿಯಿಂದ ಸರ್ಕಾರದಿಂದ ಪರಿಹಾರ ಒದಗಿಸಿ ಕೊಡುವ ಬಗ್ಗೆ ಎಲ್ಲರೂ ಪ್ರಯತ್ನಿಸೋಣ ಎಂದು ಹೇಳಿದರು,

ಶ್ರದ್ಧಾಂಜಲಿ ಸಭೆಯಲ್ಲಿ ಪತ್ರಕರ್ತರಾದ ಎಚ್.ಎಸ್ ಹರೀಶ್, ಸಾಧಿಕ್ ಅಲಿ, ಜಿಎಸ್ ಗೋನಾಳ್, ಎನ ಎಂ ,ದೊಡ್ಮನಿ, ಹನಮಂತ ಹಳ್ಳಿಕೇರಿ, ಸಿರಾಜ್ ಬಿಸರಳ್ಳಿ, ಹೆಚ್ ವಿ ರಾಜಭಕ್ಷಿ, ಅನೇಕರು ಮಾತನಾಡಿ ತೀವ್ರ ಸಂತಾಪ ವ್ಯಕ್ತಪಡಿಸಿದರು , ಸಂಘದ ಸದಸ್ಯರು ಶ್ರದ್ಧಾಂಜಲಿ ಸಭೆಯಲ್ಲಿ ಉಪಸ್ಥಿತರಿದ್ದರು.

ಕೃತಪುರ ಸೇವಾ ಸಮಿತಿಯಿಂದ ಉಚಿತ ಸಸಿ ವಿತರಣಾ ಕಾರ್ಯಕ್ರಮ: ಜಗದೀಶ್ ಎಸ್.ಪಿ.

# ಪ್ರೇರಣಾತ್ಮಕ ಕೆಲಸಗಳನ್ನು ಮಾಡೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಕೃತಪುರ ಸೇವಾ ಸಮಿತಿಯ ಸಂಘವನ್ನು ಸಾಮಾಜಿಕ ಕಾರ್ಯಕ್ರಮ ಮಾಡುವ ಉದ್ದೇಶದಿಂದ ಸ್ಥಾಪನೆ ಮಾಡಲಾಗಿದೆ. ಕಳೆದ 2 ವರ್ಷದಿಂದ ಮಧ್ಯರಾತ್ರಿ 12ಕ್ಕೆ ಸ್ವಾತಂತ್ರ ದಿನಾಚರಣೆ ಅಂಗವಾಗಿ ಧ್ವಜಾರೋಹಣ ಮಾಡುತ್ತಾ ಬಂದಿದ್ದೇವೆ. ಕಾರ್ಯಕ್ರಮದಲ್ಲಿ ಭಾಗವಹಿಸಿದ ಅತಿಥಿಗಳಿಗೆ ಸಸಿ ವಿತರಿಸಿದ್ದೇವೆ. ಈ ಬಾರಿ ಗಣೇಶ ವಿಸರ್ಜನೆ ವೇಳೆಯೂ ಸಾರ್ವಜನಿಕರಿಗೆ ಸುಮಾರು 2 ಸಾವಿರಕ್ಕೂ ಹೆಚ್ಚು ಸಸಿ ವಿತರಿಸಲು ತಿರ್ಮಾನಿಸಿದ್ದೇವೆ. ಅರಣ್ಯ ಇಲಾಖೆ ಸಹಕಾರದಿಂದ ಈ ಕಾರ್ಯ ಮಾಡುತ್ತಿದ್ದೇವೆ ಎಂದು ಕೃತಪುರ ಸೇವಾ ಸಮಿತಿ ಅಧ್ಯಕ್ಷ ಜಗದೀಶ್ ಎಸ್.ಪಿ. ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗಣೇಶೋತ್ಸವ ವಿಸರ್ಜನೆ




ವೇಳೆ ಬಹುತೇಕ ಡಿಜೆ ಸದ್ದು ಎಲ್ಲ ಕಡೆ ಕೇಳುತ್ತದೆ. ಆದರೆ, ಇದರಿಂದ ಯುವಕರು ದಾರಿ ತಪ್ಪುವ ಸಾಧ್ಯತೆ ಹೆಚ್ಚಿರುತ್ತದೆ. ಜೊತೆಗೆ, ವಯಸ್ಸಾದವರಿಗೂ ತೊಂದರೆ ಉಂಟಾಗುತ್ತದೆ. ಡಿಜೆ ಬದಲಾಗಿ ಜಾನಪದ ಕಲೆಗಳಿಗೆ ಒತ್ತು ನೀಡಿದರೆ ಕಲಾವಿದರನ್ನು ಪ್ರೋತ್ಸಾಹಿಸಿದಂತಾಗುತ್ತದೆ ಎಂದರು.

ಕೃತಪುರ ಸೇವಾ ಸಮಿತಿಯಿಂದ ವಿಭಿನ್ನ ಕಾರ್ಯಕ್ರಮ ಮಾಡುತ್ತಾ ಬಂದಿದ್ದೇವೆ. ನಮ್ಮ ಸಮಿತಿಯ ಸದಸ್ಯರು ವಿಭಿನ್ನ ಕಾರ್ಯಕ್ರಮದ ಬಗ್ಗೆ ಯಾವಾಗಲೂ ಪ್ರಸ್ತಾಪ ಮಾಡುತ್ತಾರೆ. ಅದರಂತೆ ನಾವು ಸಸಿ ನೆಡುವ ಕಾರ್ಯಕ್ರಮದ ಮೂಲಕ ಪರಿಸರದ ಬಗ್ಗೆ ಜಾಗೃತಿ ಮೂಡಿಸುತ್ತೇವೆ. ಜೊತೆಗೆ, ಸಾರ್ವಜನಿಕರು ನಮ್ಮ ಜೊತೆ ಕೈ ಜೋಡಿಸಲೆಂದು ಡಿಜೆ ಬದಲಾಗಿ ಅದೇ ಹಣದಿಂದ ಉಚಿತ ಸಸಿ ವಿತರಣೆ ಮಾಡಲು ಸಮಿತಿಯ ಪದಾಧಿಕಾರಿಗಳು ನಿರ್ಧರಿಸಿದ್ದಾರೆ. ನಮ್ಮ ಸಮಿತಿಯ ಪದಾಧಿಕಾರಿಗಳು ಇದೂವರೆಗೂ ಹಲವಾರು ಸಾಮಾಜಿಕ ಕಾರ್ಯಕ್ರಮ ಮಾಡಿಕೊಂಡು ಬಂದಿದ್ದಾರೆ. ಆದರೆ, ಇದೂವರೆಗೆ ಪ್ರಚಾರಕ್ಕಾಗಿ ಮಾಡಿಲ್ಲ. ಕೇವಲ ಮಾನವ ಕುಲದ ಒಳಿತಿಗಾಗಿ ಸಸಿ ವಿತರಣೆ ಕಾರ್ಯಕ್ರಮವನ್ನು ಅತ್ಯಂತ ಅದ್ದೂರಿಯಾಗಿ ಆಯೋಜಿಸಲು ತಿರ್ಮಾನಿಸಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸುಮಂತ್ ಹಾರೋಗೇರಿ, ಶ್ರೀಧರ್ ಬಗಾಡೆ, ಕಾರ್ತಿಕ್ ಹಿರೇಮಠ, ಶಶಿ ಡಿಗ್ಗಾವಿ, ರವಿ ಘೋಡಕೆ, ಸಚಿನ್ ಮುಂಡವಾಡ, ಮನೋಜಕುಮಾರ ಆಲೂರ, ಪುಟ್ಟರಾಜ ವೀರಶೆಟ್ಟರ್, ಸಿದ್ದಪ್ಪ ಚಿಣ್ಣಣ್ಣನವರ ಮುಂತಾದವರು ಉಪಸ್ಥಿತರಿದ್ದರು.

ಕೊಪ್ಪಳ ಜಿಲ್ಲೆಯ ಕಿನ್ನಾಳ ತಾಲೂಕಿನ ಯುವಕರು ಡಿಜೆಗೆ ಬಳಸುತ್ತಿದ್ದ ಹಣವನ್ನು ಹಳ್ಳಿಗಳ ರಸ್ತೆಯ ರಿಪೇರಿಗೆ ಬಳಸಿ ಮಾದರಿಯಾಗಿದ್ದಾರೆ. ಅವರ ಈ ಕಾರ್ಯಕ್ರಮವನ್ನು ನೋಡಿ ನಾವು ಸ್ಫೂರ್ತಿ ಹೊಂದಿ ಮಾನವನಿಗೆ ಅತ್ಯವಶ್ಯಕವಾಗಿರುವ ಗಾಳಿಯನ್ನು ನೀಡುವ ಸಸಿಗಳನ್ನು ವಿತರಿಸುವ ಮೂಲಕ ಸಮಾಜಕ್ಕೆ ಏನಾದರೂ ಒಂದು ಕೊಡುಗೆ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮಕ್ಕೆ ಕೈ ಹಾಕಿದ್ದೇವೆ. ನಾವು ಮತ್ತೊಬ್ಬರ ಕಾರ್ಯಕ್ರಮಗಳಿಗೆ ಮಾದರಿಯಾಗಿ ಸಸಿ ನೆಡುವ ಕಾರ್ಯಕ್ರಮ ಮಾಡುತ್ತಿದ್ದು, ನಮ್ಮ ಕಾರ್ಯಕ್ರಮಗಳಿಂದ ಮತ್ತೊಬ್ಬರು ಪ್ರೇರಣೆಯಾಗಿ ಇಂತಹ ಕಾರ್ಯ ಮಾಡಲಿ ಎಂದು ಆಶಿಸುತ್ತೇವೆ ಎಂದು ಜಗದೀಶ್ ಎಸ್.ಪಿ ಹೇಳಿದರು.

## ಸೆ.17 ರಂದು ಸಂಗನಹಾಳ ಚಲೋ : ಬಸವರಾಜ್ ಸೂಳಿಬಾವಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲಾ ದಲಿತ ದಮನಿತರ ದೌರ್ಜನ್ಯಗಳ ವಿರೋಧಿ ಒಕ್ಕೂಟ, ದಲಿತ ದಮನಿತರ ಮೇಲಿನ ದೌರ್ಜನ್ಯ ವಿರೋಧಿಸಿ ಸಂಗನಹಾಳ ಗ್ರಾಮದ ದಲಿತ ಯುವಕ ಯಮನಪ್ಪನ ಕೊಲೆ ಖಂಡಿಸಿ ಸೆ.17 ರಿಂದ 'ಸಮಾನ ಬದುಕಿನತ್ತ ಅರಿವಿನ ಜಾಥಾ' ಜಿಲ್ಲಾಡಳಿತದ ಕಚೇರಿಯಿಂದ ಸಂಗನಹಾಳ ತನಕ 'ಸಂಗನಹಾಳ ಚಲೋ ಮತ್ತು ಸೆ.18 ರಂದು ಸಂಗನಹಾಳದಲ್ಲಿ ಸೌಹಾರ್ದತಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಂಗನಹಾಳ ಚಲೋ ಸಂಚಾಲಕರಾದ ಬಸವರಾಜ ಸೂಳಿಬಾವಿ ಹೇಳಿದರು.

ನಗರದ ಕೆಯುಡಬ್ಲ್ಯೂಜೆ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ, ಉದ್ದೇಶಿಸಿ ಮಾತನಾಡಿ ಜಿಲ್ಲೆಯನ್ನು ದಲಿತರ ದೌರ್ಜನ್ಯ ಪೀಡಿತ ಜಿಲ್ಲೆಯೆಂದು ಘೋಷಿಸಬೇಕು. ಸರ್ಕಾರ ಜಿಲ್ಲೆಯ




ಈ ಸಮುದಾಯಗಳಿಗೆ ಸೂಕ್ತ ರಕ್ಷಣೆ ಒದಗಿಸುವ ವ್ಯವಸ್ಥೆ ಮಾಡಿ ಸ್ವತಂತ್ರವಾಗಿ ಬದುಕಲು ಉದ್ಯೋಗ ಅವಕಾಶ ಸೃಷ್ಟಿಸುವ ಕೆಲಸ ಮಾಡಬೇಕು, ಕಲ್ಯಾಣ ಕರ್ನಾಟಕವಾಗಲು ಈ ಭಾಗದ ನೆಲವಿನ್ನೂ ಸಿದ್ಧವಾಗಿಲ್ಲ. ಅದಕ್ಕೆ ತಕ್ಕುದಾದ ಜನರ ಮನಸ್ಥಿತಿ ರೂಪಿಸಲು ಸರ್ಕಾರಗಳು ಕೆಲಸ ಮಾಡಿರುವುದಿಲ್ಲ. ಮತ್ತು ರಾಜಕಾರಣಕ್ಕಾಗಿ ಘೋಷಣೆ ಮಾಡಿದ ಕಲ್ಯಾಣ ಕರ್ನಾಟಕ ಹೆಸರು ಹಿಂಪಡೆದು ಚಾರಿತ್ರಿಕವಾಗಿ ಸರಿಯಾಗಿರುವ "ಹೈದರಾಬಾದ ಕರ್ನಾಟಕ" ಹೆಸರನ್ನು ಪುನರ್ ಘೋಷಣೆಯಾಗಬೇಕು. ಆ ಹೆಸರು ಈ ಭಾಗದ ಜನರ ವಿಮೋಚನೆಯ ಹೋರಾಟದ ಜತೆಗೆ ತಳಕು ಹಾಕಿಕೊಂಡಿದೆ, ಅಸ್ಪೃಶ್ಯತೆಯ ನಿವಾರಣೆಗೆ ಶಾಶ್ವತ ಪರಿಹಾರವನ್ನು ಹುಡುಕಬೇಕಾಗಿದೆ. ಅದಕ್ಕೆ ಕಾನೂನು ತಿದ್ದುಪಡಿಗಳನ್ನು ತರಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಟಿ. ರತ್ನಾಕರ್, ಅಲ್ಲಮಪ್ರಭು ಬೆಟ್ಟದೂರು, ಡಿ.ಎಚ್ ಪೂಜಾರ್ ಮಾತನಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ್ ಶೀಲವಂತರ್, ಮುದ್ದಣ್ಣ ಸಂಗನಹಾಲ, ಶುಕರಾಜ್ ತಾಳಿಕೇರಿ, ವೆಂಕಟೇಶ್, ಹನುಮೇಶ್, ಸಂಜಯ್ ದಾಸ್ , ಮಹಾಂತೇಶ್ ಕೊತಬಾಳ, ಶಿವಪ್ಪ ಹಡಪದ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವಕ್ಫ ಬಿಲ್-2024 ವಿರುದ್ಧ ಆಕ್ಷೇಪಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಡಿ.ಪಿ.ಐ. ಗದಗ ವಿಧಾನಸಭಾ ಕ್ಷೇತ್ರ ಸಮಿತಿಯ ವತಿಯಿಂದ ದಿನಾಂಕ ಶುಕ್ರವಾರ ಗದಗ ನಗರದ ಗಾಂಧಿ ವೃತ್ತದಲ್ಲಿ ಕಾರ್ಯಕರ್ತರು, ಸಮಾಜದ ಹಿರಿಯರು, ಯುವಕರು, ಧಾರ್ಮಿಕ ಮುಖಂಡರು ಸೇರಿ ವಕ್ಫ ತಿದ್ದುಪಡಿ ಮಸೂದೆ ವಿರುದ್ಧ ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸುತ್ತ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ಜಿಲ್ಲಾಧ್ಯಕ್ಷ ಬಿಲಾಲ ಗೋಕಾವಿ, ವಕ್ಫ ಬಿಲ್-2024 ಮಸೂದೆ ಅಸಂವಿಧಾನಿಕ ಹಾಗೂ ಅಲ್ಪಸಂಖ್ಯಾತ ವಿರೋಧಿ ಬಿಲ್ ಆಗಿದೆ. ಇದನ್ನು ನಾವು ಎಂದಿಗೂ ಒಪ್ಪಿವುದಿಲ್ಲ ಎಂದರು. ಧರ್ಮಗುರುಗಳಾದ ಮೌಲಾನ್ ಶಮಶುದ್ದೀನ ಅಣ್ಣಿಗೇರಿ ಮಾತನಾಡಿ, ವಕ್ಫ ಆಸ್ತಿ ಅಲ್ಲಾಹನ ಆಸ್ತಿ. ಇದರಲ್ಲಿ ಸರ್ಕಾರ ಮಧ್ಯಸ್ಥಿಕೆ



ವಹಿಸುವುದು ಸರಿಯಲ್ಲ. ಈ ಕರಾಳ ಕಾನೂನಿನ ವಿರುದ್ಧ ನಮ್ಮ ಸಮಾಜದ ಎಲ್ಲ ಯುವಕರು, ಧಾರ್ಮಿಕ ಮುಖಂಡರು, ಸಮುದಾಯದ ನಾಯಕರು ಎಚ್ಚೆತ್ತುಕೊಳ್ಳಬೇಕಾಗಿದೆ ಎಂದು ಕರೆ ಕೊಟ್ಟರು.

ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ಅನ್ವರ ಬಾಗೇವಾಡಿ ಮಾತನಾಡಿ, ವಕ್ಫ ಆಸ್ತಿಗಳ ಸಂರಕ್ಷಣೆ ಹಾಗೂ ವಕ್ಫ ಸುಧಾರಣೆಗಳ ಹೆಸರಿನಲ್ಲಿ ಇತ್ತೀಚಿಗೆ ನರೇಂದ್ರ ಮೋದಿ ನೇತೃತ್ವದ ಒಕ್ಕೂಟ ಸರ್ಕಾರ ವಕ್ಫ ಬಿಲ್-2024 ತಂದಿರುವುದು ಅತ್ಯಂತ ಆತಂಕಕಾರಿ ವಿಷಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಹಿದಾಯತುಲ್ಲಾ ಕಾಗದಗಾರ, ಮುಸ್ತಾಕ ಕಟ್ಟಿಮನಿ, ಅನ್ವರ ಮುಲ್ಲಾ, ಹಸನ್ ನಾಗನೂರ, ಸಮೀರ ಕೊಟ್ಟೂರು, ಮುಸ್ತಾಕ ಹೊಸಮನಿ, ಅಫ್ಜಾನ್ ತರಬ್ದಾರ, ಇಬ್ರಾಹಿಂ ಕುಂದರಪಿ, ಜಾಫರ ಅಹ್ಮದ, ನೌಶಾದ ಮುಲ್ಲಾ, ಇಸ್ಮಾಯಲ್ ಅಣ್ಣಿಗೇರಿ, ಸಾದಿಕ್, ಇರ್ಫಾನ್ ಗುಳಗುಂದಿ ಸೇರಿದಂತೆ ಅನೇಕ ಕಾರ್ಯಕರ್ತರು, ಗುರುಹಿರಿಯರು, ಯುವಕರು ಪಾಲ್ಗೊಂಡಿದ್ದರು.

## ಗಜಾನನೋತ್ಸವ ಸಮಿತಿಯಿಂದ ರಕ್ತದಾನ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಪಂ.ಪಂಚಾಕ್ಷರಿ ಗವಾಯಿಗಳ ಮಾರುಕಟ್ಟೆಯಲ್ಲಿ ದಲಾಲ ವರ್ತಕರ ಸಂಘ, ಖರೀದಿದಾರರ ಸಂಘದ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಗಣೇಶ ಪ್ರತಿಷ್ಠಾಪನೆ ಅಂಗವಾಗಿ ಶುಕ್ರವಾರ ಬೆಳಿಗ್ಗೆ ಐ.ಎಂ.ಎ ಬ್ಲಡ್ ಬ್ಯಾಂಕ್ ಸಹಯೋಗದಲ್ಲಿ ರಕ್ತದಾನ ಕಾರ್ಯಕ್ರಮ ಜರುಗಿತು.

50ಕ್ಕೂ ಹೆಚ್ಚು ಜನ ಯುವಕರು ರಕ್ತದಾನ ಮಾಡಿದರು. ಐ.ಎಂ.ಎ ಬ್ಲಡ್ ಬ್ಯಾಂಕ್‌ನ ಸಿಬ್ಬಂದಿಗಳು ರಕ್ತದಾನದ ಮಹತ್ವದ ಬಗ್ಗೆ ಯುವಕರಿಗೆ ತಿಳಿಸಿಸುತ್ತ, ಒಬ್ಬ



ವ್ಯಕ್ತಿಯ ರಕ್ತದಾನದಿಂದ ನಾಲ್ಕು ಜೀವಗಳನ್ನು ಉಳಿಸಬಹುದು. ರಕ್ತದಾನದಿಂದ ನಿಮ್ಮ ಆರೋಗ್ಯ ವೃದ್ಧಿಯಾಗಲಿದೆ ಎಂದು ತಿಳಿಸಿದರು. ಐ.ಎಂ.ಎ. ಬ್ಲಡ್ ಬ್ಯಾಂಕ್ ಸಿಬ್ಬಂದಿಗಳಾದ ನಿತ್ಯಾನಂದ ಕೊಡಬಳಿ, ಇಸ್ಮಾಯಿಲ್ ಚಿಲಕವಾಡ, ಅನಿಲ ಭಜಂತ್ರಿ, ಅಕ್ಷತಾ ಅಣ್ಣಿಗೇರಿ, ಸಾಹಿಲ್ ಮುಲ್ಲಾ ರಕ್ತ ಸಂಗ್ರಹಿಸಿದರು. ಈ ಸಂದರ್ಭದಲ್ಲಿ ಟ್ರಸ್ಟ್ ಕಮಿಟಿ ಅಧ್ಯಕ್ಷ ತಿಮ್ಮಣ್ಣ ಕೋನರೆಡ್ಡಿ, ಗೌರವ ಅಧ್ಯಕ್ಷ ಪ್ರಮೋದ ವಾರಕರ, ಕಾರ್ಯದರ್ಶಿ ರಾಜಶೇಖರ ಮುಧೋಳ, ಉಪಾಧ್ಯಕ್ಷ ರಾಜು ಮೂಲಿಮನಿ, ಸಹ ಕಾರ್ಯದರ್ಶಿ ಚಂದ್ರಕಾಂತ ಸವದತ್ತಿ, ಖಜಾಂಚಿ ಮಹೇಶ ಗಾಣಗೇರ, ಸಹ ಖಜಾಂಚಿ ನೀತಿಶ ವಾಲಿ, ವಿನಾಯಕ ವಜ್ರೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಬಾಳಿಕಾಯಿ, ಗಿರೀಶ ಅಳವಂಡಿ, ದಯಾನಂದ ಗುಂಡಪ್ಪನವರ, ವಿನಯ ಕಾಡಪ್ಪನವರ, ಸಾಗರ ವಜ್ರೇಶ್ವರಿ, ಮುತ್ತಣ್ಣ ಅಂಗಡಿ, ಅಜೀತ ಪುಣೇಕರ, ಶಾಮದಾಸ ಪುಣೇಕರ, ತಾತನಗೌಡ ಪಾಟೀಲ, ಮಂಜುನಾಥ ಕವಲೂರ, ಬಸವರಾಜ ಅಂಗಡಿ ಸೇರಿದಂತೆದಲಾಲ ವರ್ತಕರ ಸಂಘದ ಹಾಗೂ ಖರೀದಿದಾರರ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ನಿಧನ ವಾರ್ತೆ

### ಶಂಕ್ರಪ್ಪ ಇಂಡಿ



ಗದಗ: ಬಿಜೆಪಿ ಹಿರಿಯ ಧುರೀಣ, ಗದಗ ಶಹರದ ಬಿಜೆಪಿ ಮಾಜಿ ಅಧ್ಯಕ್ಷರಾದ ಶಂಕ್ರಪ್ಪ ಇಂಡಿ ತಮ್ಮ 70ನೇ ವಯಸ್ಸಿನಲ್ಲಿ ನಿಧನರಾದರು. ಅವರು ಮೂವರು ಪುತ್ರಿಯರು, ಧರ್ಮಪತ್ನಿ ಹಾಗೂ ಅಪಾರ ಬಂಧುಬಳಗವನ್ನು ಬಿಟ್ಟು ಅಗಲಿದ್ದಾರೆ.

ಶಂಕ್ರಪ್ಪ ಇಂಡಿ ಅವರ ನಿಧನಕ್ಕೆ ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಹಿರಿಯರಾದ ಎಂ.ಎಸ್. ಕರೀಗೌಡ್ರ, ಕಾಂತೀಲಾಲ ಬನ್ಸಾಲಿ, ಸಂಗಮೇಶ ದುಂದುರ, ಮೋಹನ ಮಾಳಶೆಟ್ಟಿ, ಎಂ.ಎಂ. ಹಿರೇಮಠ ಸೇರಿದಂತೆ ಪಕ್ಷದ ಮುಖಂಡರು ಸಂತಾಪ ಸೂಚಿಸಿದ್ದಾರೆ.

### ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ ಸಭೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಾಕೀತು

# ನಿಗದಿತ ಗುರಿಗೆ ಅನುಗುಣವಾಗಿ ಸಾಲ ನೀಡಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಈಗ ರೈತರು ಸಂಕಷ್ಟದಲ್ಲಿದ್ದು, ಅನಗತ್ಯವಾಗಿ ಕೆಲವು ಬ್ಯಾಂಕ್‌ಗಳು ಬೆಳೆಸಾಲ ನೀಡಲು ರೈತರಿಗೆ ಸಿಬಿಲ್ ರೇಟ್ ಕಡ್ಡಾಯ ಮಾಡುತ್ತಿವೆ. ಇದರಿಂದ ರೈತರಿಗೆ ಮತ್ತು ರೈತರು ಉತ್ಪಾದಿಸುವ ಆಹಾರದ ಮೇಲೆ ನೇರ ಪ್ರಭಾವ ಬೀರುತ್ತದೆ. ಬ್ಯಾಂಕರ್ಸ್‌ಗಳು ಅನ್ವಯವಾಗದ ಕಾಯ್ದೆ, ನಿಯಮಗಳನ್ನು ಹೇಳಿ ರೈತರಿಗೆ ಬೆಳೆ ಸಾಲ ನೀಡುವಲ್ಲಿ ವಿನಾಕಾರಣ ತೊಂದರೆ ಕೊಡಬಾರದು. ಯಾವುದೇ ತಕರಾರು ಇಲ್ಲದೆ ರೈತರಿಗೆ ರೂ.10 ಲಕ್ಷವರೆಗೆ ಬೆಳೆಸಾಲ ನೀಡಲು ಆರ್.ಬಿ.ಐ ಮಾರ್ಗಸೂಚಿಗಳಿವೆ. ಇದನ್ನು ಬ್ಯಾಂಕರ್ಸ್‌ಗಳು ಪಾಲನೆ ಮಾಡಬೇಕು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿಚಾರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಹ್ಲಾದ ಜೋಶಿ ಹೇಳಿದರು.

ಅವರು ಶುಕ್ರವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಮಿತಿ ಸಭೆ ಹಾಗೂ ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಭುದೇವ ಎನ್.ಜಿ. ಮಾತನಾಡಿ, ಕೃಷಿ ಬೆಳೆಸಾಲವು ಜೂನ್ 2024ರ ಅಂತ್ಯಕ್ಕೆ 610.8 ಕೋಟಿ ರೂ.ಗಳಷ್ಟು ಗುರಿಯನ್ನು ಹೊಂದಿದ್ದು, ಜೂನ್ 2024ರ ಅಂತ್ಯಕ್ಕೆ 650.34 ಕೋಟಿ ರೂ.ಗಳಷ್ಟು ಸಾಧನೆಯಾಗಿದೆ.




ಮತ್ತು ಶೇ.106.47ರಷ್ಟು ತ್ರೈಮಾಸಿಕ ಗುರಿಯ ಶೇಕಡಾವಾರು ಸಾಧನೆಯಾಗಿದೆ.

ಕೃಷಿ ಅವಧಿ ಸಾಲವು ಜೂನ್ 2024ರ ಅಂತ್ಯಕ್ಕೆ 615.66 ಕೋಟಿ ರೂ.ಗಳಷ್ಟು ಗುರಿಯನ್ನು ಹೊಂದಿದ್ದು, ಜೂನ್ 2024ರ ಅಂತ್ಯಕ್ಕೆ 641.57 ಕೋ.ರೂಗಳಷ್ಟು ಸಾಧನೆಯಾಗಿದೆ. ಶೇ. 104.18ರಷ್ಟು ತ್ರೈಮಾಸಿಕ ಗುರಿಗೆ ಸಾಧನೆಯಾಗಿದೆ. ಸೂಕ್ಷ್ಮ, ಸಣ್ಣ, ಹಾಗೂ ಮಧ್ಯಮ ಉದ್ಯಮಗಳು ಜೂನ್ 2024ರ ಅಂತ್ಯಕ್ಕೆ 2357.81 ಕೋ.ರೂ.ಗಳಷ್ಟು ಗುರಿಯನ್ನು ಹೊಂದಿದ್ದು, ಜೂನ್ 2024ರ ಅಂತ್ಯಕ್ಕೆ 3312.98 ಕೋಟಿ ರೂ. ಗಳಷ್ಟು ಸಾಧನೆಯಾಗಿದೆ. ಶೇ.140.51ರಷ್ಟು ತ್ರೈಮಾಸಿಕ ಗುರಿಗೆ ಶೇಕಡಾವಾರು ಸಾಧನೆಯಾಗಿದೆ.

ಇತರೆ ಆದ್ಯತಾ ವಲಯದಲ್ಲಿ ಜೂನ್ 2024ರ ಅಂತ್ಯಕ್ಕೆ 180.23 ಕೋಟಿ.ರೂ.ಗಳಷ್ಟು ಗುರಿಯನ್ನು ಹೊಂದಿದ್ದು, ಜೂನ್ 2024ರ ಅಂತ್ಯಕ್ಕೆ 147.8 ಕೋಟಿ.ರೂ. ಗಳಷ್ಟು ಸಾಧನೆಯಾಗಿದೆ. ಮತ್ತು ಶೇ 82.01ರಷ್ಟು ತ್ರೈಮಾಸಿಕ ಗುರಿಗೆ ಶೇಕಡಾವಾರು ಸಾಧನೆಯಾಗಿದೆ.

> ಕೇಂದ್ರ ಸರಕಾರದಿಂದ ಸಮುದಾಯ ಮತ್ತು ವ್ಯಕ್ತಿಗತ ಯೋಜನೆಗಳನ್ನು ಸರಿಯಾಗಿ ಅನುಷ್ಠಾನಗೊಳಿಸಬೇಕು. ಕೇಂದ್ರ ಸರಕಾರ ಸ್ವಯಂ ಉದ್ಯೋಗಕ್ಕೆ ಆದ್ಯತೆ ನೀಡುತ್ತಿದೆ. ಬ್ಯಾಂಕಗಳು ನಿಗದಿತ ಗುರಿಗೆ ಅನುಗುಣವಾಗಿ ಸಾಲ ಬಿಡುಗಡೆ ಮಾಡಬೇಕು. ಕಾಲಮಿತಿಯಲ್ಲಿ ಪ್ರಗತಿ ಸಾಧಿಸಬೇಕೆಂದು ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು.

ಒಟ್ಟಾರೆಯಾಗಿ ಜೂನ್ 2024ರ ಅಂತ್ಯಕ್ಕೆ 5593.26 ಕೋಟಿ ರೂ.ಗಳ ಗುರಿಯನ್ನು ಹೊಂದಿದ್ದು, 2024ರ ಅಂತ್ಯಕ್ಕೆ 7453.82 ಕೋಟಿ ರೂ.ಗಳಷ್ಟು ಸಾಧನೆಯಾಗಿದೆ. 133.26 ತ್ರೈಮಾಸಿಕ ಗುರಿಯ ಶೇಕಡಾವಾರು ಸಾಧನೆಯಾಗಿದೆ ಎಂದು ವಿವರಣೆ ನೀಡಿದರು.

ವೇದಿಕೆಯಲ್ಲಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು, ಆರ್.ಬಿ.ಐ ಜಿಲ್ಲಾ ಅಗ್ರಣೀಯ ಅಧಿಕಾರಿ ಅರುಣಕುಮಾರ, ಬ್ಯಾಂಕ್ ಆಫ್ ಬರೋಡಾದ ಜಿಲ್ಲಾ ಪ್ರಾದೇಶಿಕ ವ್ಯವಸ್ಥಾಪಕ ವಿಜಯ ಪಾಟೀಲ, ನಬಾರ್ಡ್ ಎಜಿಎಮ್ ಮಯೂರ ಕಾಂಬ್ಳೆ ಮಾತನಾಡಿದರು.

ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಪ್ರಭುದೇವ ಎನ್.ಜಿ ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ವಿವಿಧ ಬ್ಯಾಂಕ್‌ಗಳ ಪ್ರಾದೇಶಿಕ ವ್ಯವಸ್ಥಾಪಕರು, ಶಾಖಾ ವ್ಯವಸ್ಥಾಪಕರು, ರೈತ ಪ್ರತಿನಿಧಿಗಳು,

### ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ

# 4 ಲಕ್ಷ ಸದಸ್ಯರನ್ನು ಹೊಂದುವ ಗುರಿ

■ವಿಜಯಸಾಕ್ಷಿ ಸುದ್ದಿ, ಗದಗ

ಸೆಪ್ಟೆಂಬರ್ 2ರಂದು ಪ್ರಧಾನಿ ನರೇಂದ್ರ ಮೋದಿಯವರ ದೆಹಲಿಯ ಬಿಜೆಪಿ ಕಛೇರಿಯಲ್ಲಿ ಸದಸ್ಯರಾಗುವ ಮೂಲಕ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಭಾರತೀಯ ಜನತಾ ಪಕ್ಷ ಪ್ರತಿ 6 ವರ್ಷಕ್ಕೊಮ್ಮೆ ಸದಸ್ಯತ್ವ ನವೀಕರಿಸುತ್ತದೆ. 1980ರಲ್ಲಿ ದಿ. ಅಟಲ್ ಬಿಹಾರಿ ವಾಜಪೇಯಿ ಮೊದಲ ಬಾರಿ ಬಿಜೆಪಿ ಅಧ್ಯಕ್ಷರಾದ ನಂತರ ಸದಸ್ಯತ್ವ ಅಭಿಯಾನ ಆರಂಭವಾಯಿತು. ಅಂದಿನ ಸಮಯದಲ್ಲಿ ಬಿಜೆಪಿಯಿಂದ ಕೇವಲ 2 ಸಂಸದರಿದ್ದರು. ಆದರೆ, ಇಂದು ಜಗತ್ತಿನಲ್ಲೇ ಅತೀ ಹೆಚ್ಚು ಸದಸ್ಯರನ್ನು ಹೊಂದಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2016ರಲ್ಲಿ 1 ಕೋಟಿಗಿಂತ ಹೆಚ್ಚು ಜನ ಕರ್ನಾಟಕದಲ್ಲಿ ಸದಸ್ಯರಾಗಿದ್ದರು. ಈ ಬಾರಿ




1.5 ಕೋಟಿ ಸದಸ್ಯತ್ವ ಗುರಿ ಹೊಂದಲಾಗಿದೆ. ಶಾಸಕರಾದ ಸಿ.ಸಿ ಪಾಟೀಲ್, ಡಾ. ಚಂದ್ರು ಲಮಾಣಿ, ಎಂಎಲ್‌ಸಿ ಎಸ್.ವ್ಹಿ. ಸಂಕನೂರ್ ನಾಯಕತ್ವದಲ್ಲಿ ಸದಸ್ಯತ್ವ ಅಭಿಯಾನವನ್ನು ಗದಗ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಯುವ ಮೋರ್ಚಾದ ಸದಸ್ಯರು ಪ್ರತಿ ಹಳ್ಳಿಗಳಿಗೆ ತೆರಳಿ ಈಗಾಗಲೇ ಸದಸ್ಯತ್ವ ಅಭಿಯಾನ ಆರಂಭಿಸಿದ್ದಾರೆ ಎಂದರು.

ಕಳೆದ ಬಾರಿ ಕೇವಲ ಮಿಸ್‌ಕಾಲ್ ನೀಡುವ ಮೂಲಕ ಸದಸ್ಯತ್ವ ಪಡೆಯಲಾಗುತ್ತಿತ್ತು. ಆದರೆ, ಈ ಬಾರಿ ಲಿಂಕ್ ತೆರೆದು ಸದಸ್ಯತ್ವ

> ಗದಗ ಜಿಲ್ಲೆಯಲ್ಲಿ ಈವರೆಗೆ 10 ಸಾವಿರಕ್ಕಿಂತ ಹೆಚ್ಚು ಸದಸ್ಯರು ನೋಂದಣಿ ಮಾಡಿದ್ದಾರೆ. ಜಿಲ್ಲೆಯಲ್ಲಿ 4 ಲಕ್ಷ ಸದಸ್ಯರ ಗುರಿ ಹೊಂದಲಾಗಿದ್ದು, ಗದಗ ಮತಕ್ಷೇತ್ರದಲ್ಲಿ 75 ಸಾವಿರದಿಂದ 1 ಲಕ್ಷದ ಗುರಿ ಹೊಂದಲಾಗಿದೆ.
>
> – **ಸಂತೋಷ್ ಅಕ್ಕಿ.**
> ಯುವ ಮೋರ್ಚಾ ಜಿಲ್ಲಾಧ್ಯಕ್ಷರು.

ಪಡೆಯುವುದರೊಂದಿಗೆ ಗುರುತಿನ ಚಿಟಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬೇಕಾಗುತ್ತದೆ ಎಂದು ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷ್ ಅಕ್ಕಿ ಹೇಳಿದರು.

ದೇಶಾದ್ಯಂತ ಕೇವಲ 8 ದಿನಗಳಲ್ಲಿ ಬರೊಬ್ಬರಿ 2 ಕೋಟಿ ಬಿಜೆಪಿ ಸದಸ್ಯರಾಗಿದ್ದಾರೆ. ಇದೊಂದು ದೊಡ್ಡ ಇತಿಹಾಸವಾಗಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರಾಗುತ್ತಾರೆ. ಯುವ ಮೋರ್ಚಾದಿಂದ ಈ ತಿಂಗಳು 14, 15, 16ರಂದು ಜಿಲ್ಲಾ ತಂಡದ 30 ಸದಸ್ಯರು 9 ಮಂಡಳಗಳಲ್ಲಿ 15 ಜನ ಸದಸ್ಯರು, 19 ಜಿ.ಪಂ ಕ್ಷೇತ್ರಗಳಲ್ಲಿ 957 ಬೂತ್‌ಗಳಲ್ಲಿ ಪ್ರತಿಯೊಬ್ಬ ಯುವಕ–ಯುವತಿಯರನ್ನು ಸಂಪರ್ಕಿಸಿ ಸದಸ್ಯತ್ವ ಮಾಡುವ ಕಾರ್ಯ ಆಗುತ್ತಿದೆ ಎಂದರು.

ವಿಕಸಿತ ಭಾರತ ಸಂಕಲ್ಪದ ಬಗ್ಗೆ ಕಾಲೇಜು, ಹಾಸ್ಟೆಲ್, ಮನೆ, ಪಾರ್ಕ್ ಸೇರಿದಂತೆ ಕಟ್ಟ ಕಡೆಯ ಯುವಕರನ್ನೂ ಸಂಪರ್ಕಿಸಿ ಬಿಜೆಪಿ ಸದಸ್ಯತ್ವ ಪಡೆಯಲು ಪ್ರಯತ್ನಿಸುತ್ತಿದ್ದೇವೆ. ಜಿಲ್ಲೆಯಲ್ಲಿನ 957 ಬೂತ್‌ಗಳಲ್ಲಿ ಸಂಪರ್ಕಿಸಲು 250 ಜನರು ಸಕ್ರಿಯವಾಗಿ ಪಾಲ್ಗೊಂಡು ಕೆಲಸ ಆರಂಭಿಸಿದ್ದಾರೆ. ರಾಷ್ಟ್ರದ ನಿರ್ಮಾಣ ಪ್ರಕ್ರಿಯೆಯಲ್ಲಿ ಜಿಲ್ಲೆಯ ಯುವಕ–ಯುವತಿಯರು ಭಾಗವಹಿಸಬೇಕು ಎಂದರು.

ಈ ಸಂದರ್ಭದಲ್ಲಿ ನವೀನ್ ಕುರ್ತಕೋಟಿ, ಉಮೇಶ್ ಚನ್ನುಪಾಟೀಲ್, ಧರ್ಮರಾಜ್ ಕೊಂಚಿಕೇರಿ, ಸುರೇಶ್ ಹೂಬಸೂರ, ಸಚಿನ್ ಮಡಿವಾಳರ, ಶಿವು ಗೋಟೂರ್, ಚಂದ್ರು ಕುಳಿ, ಕಾಳಪ್ಪ ತೋಟದ್, ಗೋಪಾಲ್ ಗಡ್ಡದ್ ಉಪಸ್ಥಿತರಿದ್ದರು.

# ಮಾನವ ಸರಪಳಿ: ನೋಡಲ್ ಅಧಿಕಾರಿಗಳೊಂದಿಗೆ ಸಭೆ




■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಅಂತಾರಾಷ್ಟ್ರೀಯ ಪ್ರಜಾ ಪ್ರಭುತ್ವ ದಿನಾಚರಣೆ ಹಿನ್ನೆಲೆ ಸಿದ್ಧತೆ ಪರಿಶೀಲಿಸಲು ಜಿ.ಪಂ ಉಪ ಕಾರ್ಯದರ್ಶಿ ಮಲ್ಲಪ್ಪ ತೊದಲಬಾಗಿ ಅವರು ಸೆ.13ರಂದು ಸಭೆ ನಡೆಸಿದರು.

ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಕಾರ್ಯಕ್ರಮದ ಎಲ್ಲ ನೋಡಲ್ ಅಧಿಕಾರಿಗಳೊಂದಿಗೆ ಅವರು ಸಭೆ ನಡೆಸಿದರು. ಜಿಲ್ಲೆಯಲ್ಲಿ ಕಾರ್ಯಕ್ರಮವು ಸೆ. 15ರಂದು ಅಚ್ಚುಕಟ್ಟಾಗಿ ನಡೆಯಬೇಕು.

ವಿಶೇಷವಾಗಿ ಕಾರ್ಯಕ್ರಮದ ಸಂಬಂಧ ಈಗಾಗಲೇ ನಿಯೋಜಿಸಿದ ನೋಡಲ್ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ತಮಗೆ ವಹಿಸಿದ ಕಾರ್ಯಗಳನ್ನು ಆಯಾ ನೋಡಲ್ ಅಧಿಕಾರಿಗಳು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಸೂಚನೆ ನೀಡಲಾಯಿತು.

ಸಭೆಯಲ್ಲಿ ತಾ. ಪಂ.ಇಒ ದುಂಡಪ್ಪ ತುರಾದಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ರಾಜು ತಳವಾರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಜಗದೀಶ ಸೇರಿದಂತೆ ಇನ್ನಿತರರು ಇದ್ದರು.

# ಕಟ್ಟಡ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಪ್ರವೇಶ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಈಗಾಗಲೇ ಎಸ್‌ಓಪಿ ಸೂಚನೆಗಳ ಪ್ರಕಾರ ಶೇಕಡ 75 % ರಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗಿದೆ. ಆದಾಗ್ಯೂ ಕೂಡ ಇನ್ನೂ ಹೆಚ್ಚು ಅರ್ಜಿಗಳು ಬಾಕಿ ಉಳಿದಿವೆ. ಪ್ರವೇಶ ಕೋರಿ ಬಂದ ಎಲ್ಲಾ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ನೀಡಬೇಕಾಗಿರುವುದರಿಂದ ಬಾಡಿಗೆ ಕಟ್ಟಡವನ್ನು ಪಡೆದು ಪ್ರವೇಶ ಕಲ್ಪಿಸಿಕೊಡುವಂತೆ ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಅವರು ಸೂಚಿಸಿದ್ದಾರೆ.

150 ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಇರುವ ಪ್ರತ್ಯೇಕ 20 ಕೊಠಡಿಗಳನ್ನು 11 ಶೌಚಾಲಯ, 10 ಸ್ನಾನಗೃಹ 4 ವಿಶಾಲವಾದ ದೊಡ್ಡ ಕೊಠಡಿ ಅವರಣ ಅಡುಗೆ ಮನೆ, ವಿದ್ಯುತ್ ಸೌಲಭ್ಯ ಬೋರವೆಲ್ ಹೊಂದಿರುವ ಸುಸಜ್ಜಿತ ಕಟ್ಟಡಗಳ ಅವಶ್ಯಕತೆ ಇರುತ್ತದೆ. ಒಟ್ಟು 6000 ಚದರ ಅಡಿವುಳ್ಳ ಕಟ್ಟಡವನ್ನು ಬಾಡಿಗೆ ರೂಪದಲ್ಲಿ ಕೊಡಲು ಬಯಸುವ ಕಟ್ಟಡ ಮಾಲೀಕರು ತಕ್ಷಣ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ, ಗದಗ ಇವರನ್ನು ಭೇಟಿ ನೀಡಿ ಚರ್ಚಿಸಲು ಕೋರಲಾಗಿದೆ. (ಕಚೇರಿ ದೂರವಾಣಿ ಸಂಖ್ಯೆ:08372–297258, ಮೊಬೈಲ್ 9480843128)

# ಗದಗ–ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 14 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21, 22 ಟವರ್ ಕಂಬ, ವಾಲ್ಮೀಕಿ ಭವನ, ಕಮತರ ಪ್ಲಾಟ್, ಕರುಗಲ್ ಲೇಔಟ್, ವಿಜಯನಗರ ಶಾಲೆ ಕೆಲವು ಭಾಗಗಳು. ವಾರ್ಡ್ ನಂ. 6 ನಾವಳ್ಳಿಯವರ ಲೈನ್, ರೆಡ್ಡಿಯವರ ಲೈನ್, ಅಂಬೇಡ್ಕರ್ ನಗರ, ಭಜಂತ್ರಿ ಓಣಿ, ಹುಲಿಯವರ ಲೈನ್, ಹಾದಿಮನಿಯವರ ಲೈನ್, ರೊಟ್ಟಿಯವರ ಲೈನ್, ಸಿದ್ದಲಿಂಗ ನಗರ, ಜಮಲಮ್ಮನ ಗುಡಿ ಲೈನ್.

ವಾರ್ಡ್ ನಂ. 21, 22, 23 ಕಗನಳ್ಳಿ, ಆರೋಗೇರಿ, ಹೆಬಸೂರ, ಹೊನ್ನೆತಮ್ಮ ಭಾಗ–1,2, ಸೋಮನಗೌಡ್ರ, ಕಮತರ ಲೈನ್, ವಿಭೂತಿ ಓಣಿ ಭಾಗ–1,2, ದ್ಯಾಮವ್ವನ ಕಟ್ಟಿ, ಪಡಗದ ಭಾಗ–1,2,3, ಗಂಜಿ ಬಸವೇಶ್ವರ ಸರ್ಕಲ್, ಜಂತ್ಲಿಯವರ ಲೈನ್, ಕುಂಬಾರ ಓಣಿ, ಬನ್ನಿ ಕಾಳಮ್ಮನ ಗುಡಿ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 27, 28 ಸಂಕಣ್ಣವರ ಲೇಔಟ್, ಕೇಶವ ನಗರ, ಚರ್ಚ್ ಲೈನ್, ಪಂಚಾಕ್ಷರಿ ನಗರ 2, 3ನೇ ಕ್ರಾಸ್. ಕೆಲವು ಉಳಿದ ಭಾಗಗಳು. ವಾರ್ಡ್ ನಂ. 1 ಎಸ್ ಎಂ. ಕೃಷ್ಣ ನಗರ ಪೂರ್ತಿ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ತಾಲೂಕುಗಳಲ್ಲಿ 2024–25ನೇ ಸಾಲಿನ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

# ಗುಂಪು, ವಯಕ್ತಿಕ ಸ್ಪರ್ಧೆಗಳ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ 2024–25ನೇ ಸಾಲಿನ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಆಯ್ಕೆ ಸ್ಪರ್ಧೆಗಳನ್ನು ಸೆಪ್ಟೆಂಬರ್ 17ರಿಂದ 20ರವರೆಗೆ ಆಯೋಜಿಸಿದ್ದು, ಕ್ರೀಡಾಕೂಟದಲ್ಲಿ ಪುರುಷರು ಹಾಗೂ ಮಹಿಳೆಯರು ಭಾಗವಹಿಸಬಹುದಾಗಿದೆ.

ಶಿರಹಟ್ಟಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಶಿರಹಟ್ಟಿ ಶಹರದ ಎಫ್.ಎಂ. ಡಬಾಲಿ ತಾಲೂಕು ಕ್ರೀಡಾಂಗಣದಲ್ಲಿ ಸೆ.17ರಂದು ಬೆಳಿಗ್ಗೆ 9 ಗಂಟೆಗೆ, ಲಕ್ಷ್ಮೇಶ್ವರ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಎಸ್. ಜೆ.ಎಫ್.ಸಿ. ಪ್ರೌಢಶಾಲಾ ಮೈದಾನ, ಯಳವತ್ತಿಯಲ್ಲಿ ಸೆ.18ರಂದು, ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ.19ರಂದು ಬೆಳಿಗ್ಗೆ 9 ಗಂಟೆಗೆ ಗದಗ ಶಹರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ, ರೋಣ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ರೋಣ ಶಹರದ ದ್ರೋಣಾಚಾರ್ಯ ತಾಲೂಕು



ಕ್ರೀಡಾಂಗಣದಲ್ಲಿ ಸೆ.20ರಂದು ಬೆಳಿಗ್ಗೆ 9 ಗಂಟೆಗೆ, ಗಜೇಂದ್ರಗಡ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಗಜೇಂದ್ರಗಡ ಶಹರದ ಎಸ್.ಎಂ. ಭೂಮರೆಡ್ಡಿ ಕಾಲೇಜು ಮೈದಾನದಲ್ಲಿ ಸೆ.20ರಂದು ಬೆಳಿಗ್ಗೆ 9 ಗಂಟೆಗೆ, ಮುಂಡರಗಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಮುಂಡರಗಿ ಶಹರದ ಶ್ರೀ ಅನ್ನದಾನೇಶ್ವರ ತಾಲೂಕು ಕ್ರೀಡಾಂಗಣದಲ್ಲಿ ಸೆ.20ರಂದು ಬೆಳಿಗ್ಗೆ 9 ಗಂಟೆಗೆ ಹಾಗೂ ನರಗುಂದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ನರಗುಂದ ಶಹರದ ತಾಲೂಕು ಕ್ರೀಡಾಂಗಣದಲ್ಲಿ ಸೆ. 20ರಂದು ಬೆಳಿಗ್ಗೆ 9 ಗಂಟೆಗೆ ಆಯೋಜಿಸಲಾಗಿದೆ.

ಸ್ಪರ್ಧೆಗಳ ವಿವರ:

ಪುರುಷರಿಗೆ: ಅಥ್ಲೆಟಿಕ್ಸ ಸ್ಪರ್ಧೆಗಳು–100ಮೀ, 200ಮೀ, 400ಮೀ, 800ಮೀ, 1500ಮೀ, 5000 ಮೀ ಓಟ, 10000 ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 110ಮೀ ಹರ್ಡಲ್ಸ್, 4*100 ಮೀ. ರಿಲೇ, 4*400 ಮೀ ರಿಲೇ.

ಗುಂಪು ಕ್ರೀಡೆಗಳು: ವ್ಹಾಲಿಬಾಲ್, ಕಬಡ್ಡಿ, ಖೋಖೋ ಮತ್ತು ಥ್ರೋಬಾಲ್.

ಮಹಿಳೆಯರಿಗೆ: ಅಥ್ಲೆಟಿಕ್ಸ ಸ್ಪರ್ಧೆಗಳು–100ಮೀ, 200ಮೀ, 400ಮೀ, 800ಮೀ, 1500ಮೀ, 3000 ಮೀ ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಎಸೆತ, ಡಿಸ್ಕಸ್ ಎಸೆತ, 100ಮೀ ಹರ್ಡಲ್ಸ್, 4*100 ಮೀ ರಿಲೇ, 4*400 ಮೀ ರಿಲೇ.

ಗುಂಪು ಸ್ಪರ್ಧೆಗಳು: ವಾಲಿಬಾಲ್, ಕಬಡ್ಡಿ, ಖೋಖೋ ಮತ್ತು ಥ್ರೋಬಾಲ್.

> ವೈಯಕ್ತಿಕ ಕ್ರೀಡೆಗಳಲ್ಲಿ ಪ್ರಥಮ, ದ್ವಿತೀಯ ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನವನ್ನು ಪಡೆದ ತಂಡಗಳನ್ನು ಮಾತ್ರ ಜಿಲ್ಲಾ ಮಟ್ಟಕ್ಕೆ ನಿಯೋಜಿಸಲಾಗುವುದು. ಕ್ರೀಡಾಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆಗೆ ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅರ್ಹರಲ್ಲ. ಒಬ್ಬ ಕ್ರೀಡಾಪಟು ಅಥವಾ ತಂಡ ಯಾವುದೇ ಜಿಲ್ಲೆಯಲ್ಲಿ ಒಂದು ಬಾರಿ ತಾಲೂಕು ಅಥವಾ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ನಂತರ ಬೇರೆ ಯಾವುದೇ ಜಿಲ್ಲೆಯ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕಿನ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಎಂ.ಎಸ್. ಕುಚಬಾಳ–9449814341, ಮುಂಡರಗಿ ತಾಲೂಕಿನ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಹುಸೇನಸಾಬ ಕೆ.–9845796377, ನರಗುಂದ ತಾಲೂಕಿನ ಯುವ ಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಎನ್. ಆರ್. ನಿಡಗುಂದಿ–9945256311, ರೋಣ ತಾಲೂಕಿನ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಆರ್.ಎಸ್. ನರೇಗಲ್ಲ–9164412209, ಗಜೇಂದ್ರಗಡ ತಾಲೂಕು ಯುವ ಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ವಿ.ವಿ. ಈಟಿ–6362723720, ಶಿರಹಟ್ಟಿ ತಾಲೂಕಿನ ಯುವ ಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಎಂ.ಡಿ. ತಳ್ಳಳ್ಳಿ–9449068741, ಲಕ್ಷ್ಮೇಶ್ವರ ತಾಲೂಕಿನ ಯುವ ಜನ ಸೇವಾ ಮತ್ತು ಕ್ರೀಡಾಧಿಕಾರಿಗಳಾದ ಚಂದ್ರು ಮೇಗಿಲಮನಿ–8618320040 ಇವರನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372–278003.

ಇ ಮೇಲ್: uda-gadag@hotmail.com

**ಪ್ರಕಟಣೆ**

ಸಂ: ನಅಪ್ರಾಗಬೆ/ಭೂಬ/2024–25/689 ದಿನಾಂಕ: 09–09–2024

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ ಮಲ್ಲಿಕಾರ್ಜುನ ಫಕ್ಕೀರಪ್ಪ ಮಲ್ಲಾಡದ ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1 | ನರಸಾಪೂರ | 154/*/2 | 01ಎಕರೆ–28ಗುಂಟೆ ಪೈಕಿ (01 ಗುಂಟೆ 'ಬ' ಖರಾಬು ಹೊರತುಪಡಿಸಿ) 01ಎಕರೆ–27ಗುಂಟೆ | ವಾಣಿಜ್ಯ | ವಸತಿ |

ಸಹಿ/– ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ

ವಾ.ಸಾ.ಇ/ಗದಗ/206/ದೇಶಪಾಂಡೆಪಬ್ಲಿಸಿಟಿ/2024–25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka